# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 24 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 27–07–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 24 | Title- Code: KARKAN 28269 | Chitradurga | Date: 27-07-2023 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಸರ್ಕಾರ ದೇವರ ಎತ್ತುಗಳಿಗೆ ಶಾಶ್ವತ ಮೇವು ವಿತರಣೆಗೆ ಮುಂದಾಗಲಿ 2

ಅಪ್ಪ ಮಗನ ಕಾಲದ ಕಾಮಗಾರಿಗಳು ತನಿಖೆಯಾಗಲಿ: ಮಾಜಿ ಸಚಿವ ವಿ.ಸೋಮಣ್ಣ ಗುಟುರು 3

ಆರೋಗ್ಯಕರ ಸಮಾಜ ನಿರ್ಮಾತೃ ಡಾ.ಮಹಾಂತ ಶಿವಯೋಗಿ ಜನ್ಮ ದಿನ 4


# ಕೋಟೆ ನಾಡಿಗೆ ಕಾಲಿಟ್ಟ ಮದ್ರಾಸ್ ಐ

» **ಚಿತ್ರದುರ್ಗ**

ರಾಜ್ಯದಲ್ಲಿ ಚಳಿಗಾಲಕ್ಕೂ ಮುನ್ನವೇ ಮದ್ರಾಸ್ ಐ ಕಾಯಿಲೆ ಹೆಜ್ಜೆ ಇಡುತ್ತಿದೆ. ಕೋಟೆ ನಾಡು ಚಿತ್ರದುರ್ಗ ಜಿಲ್ಲೆಯಲ್ಲಿ ಕೆಲವು ಕಡೆಗಳಲ್ಲಿ ಜನರಿಗೆ ಮದ್ರಾಸ್ ಐ( ಕಣ್ಣಿನ ಕಾಯಿಲೆ) ಕಾಣಿಸಿಕೊಂಡಿದ್ದು, ಈ ಬಾರಿ ಮಳೆಗಾಲದಲ್ಲೇ ಆರಂಭಗೊಂಡಿದ್ದು ಮತ್ತಷ್ಟು ಆತಂಕ ಹುಟ್ಟಿಸಿದೆ. ಜೊತೆಗೆ ಮಕ್ಕಳೇ ಈ ರೋಗಕ್ಕೆ ಹೆಚ್ಚು ತುತ್ತಾಗುತ್ತಿದ್ದು, ಎಚ್ಚರ ತಪ್ಪಿದ್ರೇ ಮತ್ತಷ್ಟು ಜನರಿಗೆ ಹರಡುವ ಭೀತಿ ಎದುರಾಗಿದೆ.

ಚಿತ್ರದುರ್ಗ ಜಿಲ್ಲೆಯಲ್ಲಿ ಈ ಕಾಯಿಲೆಯ ಕಳೆದ ಎರಡ್ಮೂರು ದಿನಗಳಿಂದ ಕಾಣಿಸಿಕೊಂಡಿದ್ದು ದಾವಣಗೆರೆ ಜಿಲ್ಲೆಯ ಆಸ್ಪತ್ರೆಗಳಿಗೆ ಶಿವಮೊಗ್ಗ ಭಾಗದಿಂದ ಹೆಚ್ಚಿನ ಜನರು ಚಿಕಿತ್ಸೆ ಪಡೆಯಲು ಬರುತ್ತಿದ್ದಾರೆ. ದಾವಣಗೆರೆ ಚಿತ್ರದುರ್ಗಕ್ಕೆ ಹೆಚ್ಚಿನ ಒಡನಾಟ ಮತ್ತು ಹೆಚ್ಚಿನ ಜನರು ಅನೇಕ ಕೆಲಸ ಕಾರ್ಯಗಳಿಗೆ ತೆರಳುವುದರಿಂದ ಈ ವೈರಸ್ ಒಬ್ಬರಿಂದ ಒಬ್ಬರಿಗೆ ಬಹುಬೇಗ ಹರಡುತ್ತದ್ದು ಜನರು ಎಚ್ಚರಿಕೆ ವಹಸಿದರೆ ಹೆಚ್ಚು ಹರಡುವಿಕೆ ತಪ್ಪಿಸಬಹುದಾಗಿದೆ.

ಸಾಮಾನ್ಯವಾಗಿ ಚಳಿಗಾಲದಲ್ಲಿ ಕಾಣಿಸಿಕೊಳ್ಳುತ್ತಿದ್ದ ಮದ್ರಾಸ್ ಐ ಈ ಬಾರಿ ಮಳೆಗಾಲದಲ್ಲೇ ಆರಂಭವಾಗಿದೆ. ರಾಜ್ಯದ ಜನರ ಕಣ್ಣುಗಳು ಮದ್ರಾಸ್ ಐ ರೋಗದ ಕಾರಣ ಕೆಂಪಾಗುತ್ತಿವೆ. ಅತಿ ಹೆಚ್ಚು ಜನರಿರುವ ಶಾಲಾ–ಕಾಲೇಜುಗಳು ಹಾಗೂ ಹಾಸ್ಟೆಲ್ ವಿದ್ಯಾರ್ಥಿಗಳಲ್ಲಿ ಮದ್ರಾಸ್ ಐ ವೈರಾಣು ಅತಿ ವೇಗವಾಗಿ ಹರಡುತ್ತಿರುವುದರಿಂದ ಎಲ್ಲೆಡೆ ಆತಂಕ ಹುಟ್ಟಿಸುತ್ತಿದೆ.

ಕಂಜಕ್ಟಿವೈಟಿಸ್ ಎಂದು ಕರೆಯಲಾಗುವ ಮದ್ರಾಸ್ ಐ ಅಥವಾ ಕಣ್ಣು ವೈರಾಣುಗಳಿಂದ ಹರಡುವ ಕಣ್ಣಿನ ಸಮಸ್ಯೆ ಇದಾಗಿದೆ. ವಾತಾವರಣದಲ್ಲಿ ತೇವಾಂಶ ಹೆಚ್ಚಾದಾಗ ಅಥವಾ ಚಳಿ ವಾತಾವರಣದಲ್ಲಿ ಹುಟ್ಟಿಕೊಳ್ಳುವ ವೈರಾಣುಗಳು ನೇರವಾಗಿ ಕಣ್ಣಿನ ಮೇಲೆ ಪರಿಣಾಮ ಉಂಟು ಮಾಡುತ್ತಿವೆ. ಜುಲೈ ಆರಂಭದಿಂದಲೂ ರಾಜ್ಯಾದ್ಯಂತ ಸುರಿಯುತ್ತಿದ್ದು, ಸೂರ್ಯನ ಕಿರಣಗಳ ದರ್ಶನಅಪರೂಪವಾಗಿರುವುದು,ವಾತಾವರಣದಲ್ಲಿ ತೇವಾಂಶ ಹೆಚ್ಚಾಗಿರುವುದೇ ಮದ್ರಾಸ್ ಐ ಮಳೆಗಾಲದಲ್ಲೇ ಆರಂಭಗೊಳ್ಳಲು ಕಾರಣ ಎನ್ನಲಾಗುತ್ತಿದೆ.



**ದಿನೇ ದಿನೇ ಸೋಂಕಿತರ ಸಂಖ್ಯೆ ಏರಿಕೆ:** ಮದ್ರಾಸ್ ಐ ವೈರಾಣುವಿಗೆ ಮಧ್ಯ ಕರ್ನಾಟಕ, ಮಲೆನಾಡು ಭಾಗದಲ್ಲಿ ಕಳೆದ 12 ದಿನಗಳಿಂದ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿವೆ. ದಾವಣಗೆರೆಯ ಚಿಗಟೇರಿ ಜಿಲ್ಲಾಸ್ಪತ್ರೆಯ ಕಣ್ಣಿನ ವಿಭಾಗಕ್ಕೆ ನಿತ್ಯ ಮದ್ರಾಸ್ ಐ ನಿಂದ ಬಳಲುತ್ತಿರುವ 60 ರಿಂದ 80 ರೋಗಿಗಳು ಬರುತ್ತಿರೋದಾಗಿ ತಿಳಿದು ಬಂದಿದೆ.

ಇದೇ ರೀತಿಯಲ್ಲಿ ಮಲೆನಾಡು ಸೇರಿದಂತೆ ರಾಜ್ಯದ ಇತರೇ ಜಿಲ್ಲೆಗಳಲ್ಲಿಯೂ ಮದ್ರಾಸ್ ಐ ವೈರಾಣು ಸಮಸ್ಯೆಯಿಂದಾಗಿ ಜನರು ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆಯುತ್ತಿರುವುದು ಕಂಡು ಬಂದಿದೆ.

**ಮಕ್ಕಳೇ ಟಾರ್ಗೆಟ್:** ಈ ಬಾರಿ ಮಕ್ಕಳಿಗೆ ಮದ್ರಾಸ್ ಐ ಹೆಚ್ಚು ಕಾಣಿಸಿಕೊಳ್ಳುತ್ತಿದೆ. ಕೆಂಗಣ್ಣಿನಿಂದಾಗಿ ಮಕ್ಕಳು ಬಳಲುತ್ತಿರುವುದು ಅಲ್ಲಲ್ಲಿ ವರದಿಯಾಗಿದೆ.ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಶಾಲಾ–ಕಾಲೇಜು ಮಕ್ಕಳಲ್ಲಿ ಮದ್ರಾಸ್ ಐ ವೈರಾಣು ಕಾಣಿಸಿಕೊಂಡ ಪರಿಣಾಮ, ಕೆಲ ದಿನಗಳ ಕಾಲ ಆ ಶಾಲೆಗೆ ರಜೆಯನ್ನು ಕೂಡ ನೀಡಿ, ನಿಯಂತ್ರಣ ಕ್ರಮವಹಿಸಲಾಗಿದೆ.ಇನ್ನೂ ಶಾಲೆ ಮಾತ್ರವಲ್ಲದೇ ಹಾಸ್ಟೆಲ್ ಗಳಲ್ಲಿಯೂ ಈ ಸಮಸ್ಯೆ ತೀವ್ರವಾಗಿದೆ. ಶಾಲಾ–ಕಾಲೇಜು ಹಾಗೂ ಹಾಸ್ಟೆಲ್ ಗಳಲ್ಲಿ ವಿದ್ಯಾರ್ಥಿಗಳು ಒಟ್ಟಿಗೆ ಇರುವುದು, ಪೆನ್, ಪುಸ್ತಕ ಮತ್ತಿತರ ವಸ್ತುಗಳನ್ನು ಶೇರ್ ಮಾಡುವುದರಿಂದ ವೈರಾಣುಗಳು ವ್ಯಾಪಕವಾಗಿ ಮಕ್ಕಳಿಗೆ ಹರಡುತ್ತಿರುವುದು ಕಂಡು ಬಂದಿದೆ.

### ಮದ್ರಾಸ್ ಐ ನಿಯಂತ್ರಿಸಲು ಏನು ಮಾಡಬೇಕು? ಪರಿಹಾರವೇನು?

- ಸಮಸ್ಯೆಯಿಂದ ಬಳಲುತ್ತಿರುವವರು ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆಯಬೇಕು. ಮದ್ರಾಸ್ ಐ ಕಾಣಿಸಿಕೊಂಡವರಿಂದ ದೂರ ಇರಬೇಕು.
- ಮದ್ರಾಸ್ ಐ ವೈರಾಣು ಸಮಸ್ಯೆಗೆ ಐಡ್ರಾಪ್, ಕಣ್ಣಿನ ಟ್ಯೂಬ್ ಔಷಧಿಯನ್ನು ಬಳಸಿದ್ರೇ., ಬೇಗ ರೋಗ ವಾಸಿಯಾಗಲಿದೆ.
- ಮದ್ರಾಸ್ ಐ ನಿಂದ ಬಳಲುತ್ತಿರುವವರು, ಸಮಸ್ಯೆ ಕಡಿಮೆಯಾಗುವವರೆಗೂ ಗಾಳಿಗೆ ಹೋಗಬಾರದು. ಮನೆಯಲ್ಲೇ ಇದ್ದರೆ ಒಳಿತು.
- ದ್ವಿಚಕ್ರ ವಾಹನವನ್ನು ಓಡಿಸಬಾರದು. ಸ್ಕ್ರೀನ್ ಟೈಮ್ ಕಡಿಮೆ ಮಾಡಿ, ಕಣ್ಣಿಗೆ ವಿಶ್ರಾಂತಿ ನೀಡಿ. ತಪ್ಪದೇ ಕಪ್ಪು ಕನ್ನಡಕವನ್ನು ಬಳಸಿ.



ಮದ್ರಾಸ್ ಐ ಪ್ರಕರಣಗಳು ಜಿಲ್ಲೆಯಲ್ಲಿ ಕಡಿಮೆ ಇದ್ದು ಎರಡು ದಿನಗಳಿಂದ ಕೆಲವು ಕಡೆ ಪ್ರಕರಣ ದಾಖಲಾಗುತ್ತಿವೆ.ಈ ವೈರಾಣು ವೇಗವಾಗಿ ಹರಡುತ್ತದೆ. ಜನರು ಮದ್ರಾಸ್ ಐ ಕಣ್ಣಿನ ತೊಂದರೆ ಆದವರು ಬಳಸಿದ ವಸ್ತುಗಳಿಂದ ಬಳಸಬಾರದು,ಕಾಯಿಲೆ ಆದ ವ್ಯಕ್ತಿಯಿಂದ ಅಂತರ ಕಾಯ್ದುಕೊಳ್ಳಬೇಕು.ಸ್ವಲ್ಪ ಗಾಳಿಗೆ ಹೋಗದಂತೆ ಜಾಗೃತಿ ವಹಿಸಿ ಕೂಡಲೇ ಚಿಕಿತ್ಸೆ ಪಡೆದರೇ ಆತಂಕ ಪಡುವ ಅವಶ್ಯಕತೆ ಇಲ್ಲ.

» **ಡಾ.ಆರ್. ರಂಗನಾಥ್. ಡಿಹೆಚ್ ಚಿತ್ರದುರ್ಗ ಜಿಲ್ಲೆ**

## ಫಾಸ್ಟ್ ನ್ಯೂಸ್

### ಸಿರಿಗೆರೆಯಲ್ಲಿ 26 ಮಿ.ಮೀ ಮಳೆ

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಮಂಗಳವಾರ ಸುರಿದ ಮಳೆಯ ವಿವರದನ್ವಯ ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆಯಲ್ಲಿ 26 ಮಿ.ಮೀ ಮಳೆಯಾಗಿದ್ದು, ಇದು ಜಿಲ್ಲೆಯ ಅತ್ಯಧಿಕ ಮಳೆಯಾಗಿದೆ.

ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗ–1ರಲ್ಲಿ 22.8 ಮಿ.ಮೀ, ಚಿತ್ರದುರ್ಗ–2ರಲ್ಲಿ 20.6 ಮಿ.ಮೀ, ಐನಹಳ್ಳಿ 15.8 ಮಿ.ಮೀ, ಭರಮಸಾಗರ 14.2 ಮಿ.ಮೀ, ತುರುವನೂರು 8.6 ಮಿ.ಮೀ, ಹಿರೇಗುಂಟನೂರು 3.2 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 18.4 ಮಿ.ಮೀ, ಹೆಚ್.ಡಿ ಪುರ 21 ಮಿ.ಮೀ, ಚಿಕ್ಕಜಾಜೂರು 15.2 ಮಿ.ಮೀ, ಬಿ. ದುರ್ಗ 17.2 ಮಿ.ಮೀ, ತಾಳ್ಯ 12.4 ಮಿ.ಮೀ, ರಾಮಗಿರಿ 9.4 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 18.2 ಮಿ.ಮೀ, ಬಾಗೂರು 25.5 ಮಿ.ಮೀ, ಮತ್ತೋಡು 6.4 ಮಿ.ಮೀ, ಶ್ರೀರಾಂಪುರ 14.2 ಮಿ.ಮೀ, ಮಾಡದಕೆರೆ 11 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 16.2 ಮಿ.ಮೀ, ಇಕ್ಕನೂರು 9 ಮಿ.ಮೀ, ಈಶ್ವರಗೆರೆ 12 ಮಿ.ಮೀ, ಬಬ್ಬೂರು 15.8 ಮಿ.ಮೀ, ಸುಗೂರು 15 ಮಿ.ಮೀ ಮಳೆಯಾಗಿದೆ. ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 5.4 ಮಿ.ಮೀ, ಪರುಶುರಾಂಪುರ 16 ಮಿ.ಮೀ, ನಾಯಕನಹಟ್ಟಿ 10.4 ಮಿ.ಮೀ, ತಳಕು 2.4 ಮಿ.ಮೀ, ಡಿ. ಮರಿಕುಂಟೆ 14.3 ಮಳೆಯಾಗಿದೆ. ಮೊಳಕಾಲ್ಮೂರು ತಾಲ್ಲೂಕಿನ ಮೊಳಕಾಲ್ಮೂರುನಲ್ಲಿ 4 ಮಿ.ಮೀ, ರಾಯಾಪುರ 6 ಮಿ.ಮೀ, ಬಿಜಿಕೆರೆ 8 ಮಿ.ಮೀ, ರಾಂಪುರ 6.1 ಮಿ.ಮೀ, ದೇವಸಮುದ್ರ 6.3 ಮಿ.ಮೀ ಮಳೆಯಾಗಿದೆ ಎಂದು ಜಿಲ್ಲಾಧಿಕಾರಿ ಕಚೇರಿ ಪ್ರಕಟಣೆ ತಿಳಿಸಿದೆ.

### ಶಿಷ್ಯವೇತನಕ್ಕಾಗಿ ಅರ್ಜಿ

» **ಚಿತ್ರದುರ್ಗ**

ಮಿಲಿಟರಿ ಪಿಂಚಣಿ ರಹಿತ ಕರ್ನಾಟಕದ ಮಾಜಿ ಸೈನಿಕರ ಹಾಗೂ ಕರ್ನಾಟಕದಲ್ಲಿ ನೆಲೆಸಿರುವ ಹೊರರಾಜ್ಯದ ಮಿಲಿಟರಿ ಪಿಂಚಣಿದಾರ ಮಾಜಿ ಸೈನಿಕರ ಮಕ್ಕಳಿಗೆ ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದ ವಿದ್ಯಾಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಒಂದನೇ ತರಗತಿಯಿಂದ ಪಿ.ಯು.ಸಿ ಎರಡನೇ ವರ್ಷದವರೆಗೆ ಓದುವ ಮಕ್ಕಳಿಗೆ ಪುಸ್ತಕ ಅನುದಾನಕ್ಕಾಗಿ ಮತ್ತು ಡಿಗ್ರಿ, ಡಿಪ್ಲೊಮಾ, ಜೆ.ಓ.ಸಿ ಪ್ರೊಫೆಷನಲ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಶಿಷ್ಯವೇತನಕ್ಕಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ. ಶುಲ್ಕ ರಹಿತ ಅರ್ಜಿಗಳನ್ನು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಛೇರಿಯಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಸೆಪ್ಟಂಬರ್ 30 ರೊಳಗಾಗಿ ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಕಛೇರಿಯ ದೂರವಾಣಿ ಸಂಖ್ಯೆ 08182–220925 ಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು

## 31ರಿಂದ ರಾಜ್ಯದ ಮಳೆ ಪೀಡಿತ ಪ್ರದೇಶಗಳಿಗೆ ಸಿಎಂ ಭೇಟಿ

» **ಬೆಂಗಳೂರು**



ರಾಜ್ಯದ ಹಲವು ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗುತ್ತಿದ್ದು, ಹಲವು ಕಡೆ ಮನೆಗಳು, ರಸ್ತೆ ಕುಸಿದು ಜನ ಜೀವನ ಅಸ್ತವ್ಯಸ್ತವಾಗಿದೆ. ಈ ಹಿನ್ನೆಲೆ ಜುಲೈ 31ರಿಂದ ರಾಜ್ಯದ ಮಳೆಪೀಡಿತ ಜಿಲ್ಲೆಗಳಿಗೆ ಸಿಎಂ ಸಿದ್ದರಾಮಯ್ಯ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ.

ಈ ಬಗ್ಗೆ ಸುದ್ದಿಗಾರರ ಜೊತೆ ಮಾತನಾಡಿದ ಸಿಎಂ ಸಿದ್ದರಾಮಯ್ಯ ಸೋಮವಾರ ಮಂಗಳೂರು, ಉಡುಪಿ, ಉತ್ತರ ಕನ್ನಡ ಹಾಗೂ ಚಿಕ್ಕಮಗಳೂರು ಜಿಲ್ಲೆಗೆ ಭೇಟಿ ನೀಡಲಿದ್ದು, ಮಳೆಯಿಂದ ಹಾನಿಗೊಳಗಾಗಿರುವ ಪ್ರದೇಶಗಳ ಜನರನ್ನು ಭೇಟಿಯಾಗಿ ಅವರ ಕಷ್ಟಗಳನ್ನು ಆಲಿಸಲಾಗುವುದು. ಸಚಿವ ಕೃಷ್ಣ ಬೈರೇಗೌಡರು ನಿನ್ನೆ ಕೊಡಗು ಜಿಲ್ಲೆಗೆ ಭೇಟಿ ನೀಡಿದ್ದಾರೆ ಎಂದರು.

ಎಲ್ಲೆಡೆ ಮಳೆಯಾಗಿರುವುದರಿಂದ ಕುಡಿಯುವ ನೀರಿನ ಸಮಸ್ಯೆ ಇಲ್ಲ. ಟ್ಯಾಂಕರ್ ನೀರಿನ ಸರಬರಾಜು ಮಾಡಲಾಗುತ್ತಿತ್ತು. ಆದರೆ ಈಗ ಕುಡಿಯುವ ನೀರಿನ ಸಮಸ್ಯೆ ಬಗೆಹರಿದಿದೆ ಎಂದರು. ಮಳೆಯಿಂದಾಗಿ ಕೈ ಮೀರಿ ಹೋಗುವ ಪರಿಸ್ಥಿತಿ ನಿರ್ಮಾಣವಾಗಿಲ್ಲ. ಕೆ.ಆರ್.ಎಸ್ , ಕಬಿನಿ, ಹಾರಂಗಿ, ಹೇಮಾವತಿ, ಆಲಮಟ್ಟಿ, ಸೇರಿದಂತೆ ಎಲ್ಲಾ ಜಲಾಶಯಗಳಿಗೆ ನೀರು ಬರುತ್ತಿರುವುದು ರೈತರಿಗೆ ಹಾಗೂ ಸರ್ಕಾರಕ್ಕೆ ಸಂತೋಷ ತಂದಿದೆ. ಹಾವೇರಿಯಲ್ಲಿ 87% ಬಿತ್ತನೆಯಾಗಿದೆ ಎಂದರು.

## ಐವರು ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ದಾವಣಗೆರೆಗೆ ನೂತನ ಡಿಸಿ

» **ಬೆಂಗಳೂರು**

ಐವರು ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಡಾ. ವೆಂಕಟೇಶ್ ಎಂ.ವಿ.– ಜಿಲ್ಲಾಧಿಕಾರಿ ದಾವಣಗೆರೆ ಜಿಲ್ಲೆ.

ಗಂಗೂಬಾಯಿ ರಮೇಶ್ ಮಾನಕರ– ಉಪ ಆಯುಕ್ತರು, ಉತ್ತರ ಕನ್ನಡ ಜಿಲ್ಲೆ. ಗಂಗಾಧರಸ್ವಾಮಿ ಜಿ.ಎಂ– ನಿರ್ದೇಶಕರು, ಕೃಷಿ ಮಾರುಕಟ್ಟೆ ಇಲಾಖೆ, ಬೆಂಗಳೂರು ಎಂದು ಪೋಸ್ಟ್ ಮಾಡಲಾಗಿದೆ. ಶ್ರೀ ನಾಗೇಂದ್ರ ಪ್ರಸಾದ್ ಕೆ.– ನಿರ್ದೇಶಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ. ಅಶ್ವಿಜಾ ಬಿ. ವಿ– ಆಯುಕ್ತರು, ತುಮಕೂರು ಮಹಾನಗರ ಪಾಲಿಕೆ, ತುಮಕೂರು






**ಪ್ರಮುಖ ಸುದ್ದಿ**

# ಕೇಂದ್ರದ ವಿರುದ್ಧ ಅವಿಶ್ವಾಸ ಮಂಡಿಸಿದ ಇಂಡಿಯಾ

» **ನವದೆಹಲಿ**

ಪ್ರಧಾನಿ ನರೇಂದ್ರಮೋದಿ ಸರ್ಕಾರದ ವಿರುದ್ಧ ಸಮರ ಸಾರಿರುವ ಇಂಡಿಯಾ ಮೈತ್ರಿಕೂಟ ಲೋಕಸಭೆಯಲ್ಲಿಂದು ಅವಿಶ್ವಾಸ ಗೊತ್ತುವಳಿಯನ್ನು ಮಂಡಿಸಿದೆ. ದೇಶಾದ್ಯಂತ ಭಾರಿ ಕೋಲಾಹಲಕ್ಕೆ ಕಾರಣವಾಗಿರುವ ಮಣಿಪುರದಲ್ಲಿ ನಡೆದ ಜನಾಂಗೀಯ ಹಿಂಸಾಚಾರ ಕುರಿತಂತೆ ಪ್ರಧಾನಿಯವರು ಮೌನಕ್ಕೆ ಶರಣಾಗಿದ್ದು, ಈ ಕುರಿತು ಲೋಕಸಭೆಯಲ್ಲಿ ಹೇಳಿಕೆ ನೀಡುವಂತೆ ಬಿಗಿಪಟ್ಟು ಹಿಡಿದಿರುವ ವಿಪಕ್ಷಗಳ ಮೈತ್ರಿಕೂಟ ಇಂಡಿಯಾ ಎನ್‌ಡಿಎ ಸರ್ಕಾರದ ವಿರುದ್ಧ ಅವಿಶ್ವಾಸ ನಿರ್ಣಯವನ್ನು ಮಂಡಿಸಿವೆ.

ದೇಶಾದ್ಯಂತ ಕೋಲಾಹಲಕ್ಕೆ ಕಾರಣವಾಗಿರುವ ಮಣಿಪುರ ಹಿಂಸಾಚಾರ ಪ್ರಕರಣದ ವಿರುದ್ಧ ಇಂಡಿಯಾ ಮೈತ್ರಿಕೂಟ ಸಮರ ಸಾರಿದ್ದು, ಕೇಂದ್ರ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಲು ತಂತ್ರ ಹೆಣೆದಿದೆ. ಅದರಂತೆಮಣಿಪುರಹಿಂಸಾಚಾರಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಪಕ್ಷಗಳ ಮೈತ್ರಿಕೂಟ



"ಇಂಡಿಯಾ" ಪ್ರಧಾನಿ ನರೇಂದ್ರ ಮೋದಿ ವಿರುದ್ದ ಲೋಕಸಭೆಯಲ್ಲಿ ಅವಿಶ್ವಾಸ ನಿರ್ಣಯ ಮಂಡಿಸಿವೆ.ಮೋದಿ ಸರ್ಕಾರದ ಮೊದಲ ಅವಧಿಯಲ್ಲಿ ಅವಿಶ್ವಾಸ ನಿರ್ಣಯ ಮಂಡಿಸಿದ ನಂತರ ಎರಡನೇ ಅವಧಿಯಲ್ಲಿ ಮತ್ತೊಮ್ಮೆ ಅವಿಶ್ವಾಸ ಗೊತ್ತುವಳಿ ಮಂಡಿಸಲಾಗಿದೆ. ಈ ಮೂಲಕ ಎನ್‌ಡಿಎ ಸರ್ಕಾರದ ವಿರುದ್ಧ ವಿಪಕ್ಷಗಳು ಸಮರ ಸಾರಿವೆ.

ವಿರೋಧ ಪಕ್ಷಗಳ 50 ಕ್ಕಿಂತ ಹೆಚ್ಚು ಲೋಕಸಭೆಯ ಸದಸ್ಯರು ಪ್ರಧಾನಿ ವಿರುದ್ದ ಅವಿಶ್ವಾಸ ನಿರ್ಣಯ ಮಂಡನೆಗೆ ಸಹಿ ಹಾಕಿದ್ದು ಲೋಕಸಭಾಧ್ಯಕ್ಷರಿಗೆ ಅವಿಶ್ವಾಸ ಮಂಡನೆಯ ನೋಟೀಸ್ ನೀಡಿ ಚರ್ಚೆಗೆ ಅವಕಾಶ ಮಾಡಿಕೊಡುವಂತೆ ಕೋರಲಾಗಿದೆ ಎಂದು ಲೋಕಸಭೆಯಲ್ಲಿ ಕಾಂಗ್ರೆಸ್‌ನ ಉಪನಾಯಕ ಗೌರವ್ ಗೋಗಿ ತಿಳಿಸಿದ್ದಾರೆ.

ಚರ್ಚೆಗೆ ಸಮಯ ನಿಗದಿ ಸ್ಪೀಕರ್ ಭರವಸೆಅವಿಶ್ವಾಸ ನಿರ್ಣಯ ಸಂಬಂಧ ಲೋಕಸಭೆಯಲ್ಲಿ ಗದ್ದಲ ಉಂಟಾಗಿ ಸದನವನ್ನುಒಂದು ಬಾರಿ ಮುಂದೂಡಲಾಗಿತ್ತು. ನಂತರ ಸದನ ಸಮಾವೇಶಗೊಂಡಾಗ ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಅವರು ವಿಪಕ್ಷಗಳ ಒಕ್ಕೂಟ ಇಂಡಿಯಾ ಸಲ್ಲಿಸಿರುವ ಅವಿಶ್ವಾಸ ಪ್ರಸ್ತಾವನೆ ಕುರಿತು ಮಾತನಾಡಿ ಚರ್ಚೆಗೆ ಸಮಯವನ್ನು ನಿಗದಿ ಮಾಡುವುದಾಗಿ ಹೇಳಿದರು.

ಎಲ್ಲ ಪಕ್ಷಗಳೊಂದಿಗೆ ಚರ್ಚಿಸಿ ಅವಿಶ್ವಾಸ ನಿರ್ಣಯದ ಚರ್ಚೆಯ ದಿನಾಂಕ ಮತ್ತು ಸಮಯವನ್ನುನಿಗದಿಮಾಡುವುದಾಗಿಯೂ ಸ್ಪೀಕರ್ ಓಂಬಿರ್ಲಾ ಹೇಳಿದರು.

ಕಾಂಗ್ರೆಸ್ ಮುಖ್ಯಸಚೇತಕ ಮಾಣಿಕಂ ಟ್ಯಾಗೋರ್ ಅವರು ಅವಿಶ್ವಾಸ ನಿರ್ಣಯವನ್ನು ಮಂಡಿಸುವ ವಿಧಾನ ಟ್ವೀಟ್ ಮಾಡಿ, ಪಕ್ಷದ ಸದಸ್ಯರಿಗೆ ಪಕ್ಷ ಮೂರು ಸಾಲಿನ ವಿಪ್ ಕೂಡ ಜಾರಿ ಮಾಡಿದೆ.

ಪುಟ 3

## ಫಾಸ್ಟ್ ನ್ಯೂಸ್

### ಕುಂಬಳೂರು ಗೋಡೆ ಕುಸಿದು ಹೆಣ್ಣು ಮಗು ಮೃತ ಜಿಲ್ಲಾಧಿಕಾರಿಗಳಿಂದ 5 ಲಕ್ಷ ಪರಿಹಾರ



» **ದಾವಣಗೆರೆ**

ಜಿಲ್ಲೆಯಲ್ಲಿ ನಿರಂತರ ಸುರಿಯುತ್ತಿರುವ ಮಳೆಗೆ ಹರಿಹರ ತಾಲ್ಲೂಕಿನ ಕುಂಬಳೂರು ಗ್ರಾಮದಲ್ಲಿ ಮನೆಯ ಗೋಡೆ ಕುಸಿದು ಒಂದು ವರ್ಷ ಐದು ತಿಂಗಳ ಹೆಣ್ಣು ಮಗು ಮೃತಪಟ್ಟಿದ್ದು, ಜಿಲ್ಲಾಧಿಕಾರಿ ಶಿವಾನಂದ ಕಾಪಶಿ ಭೇಟಿ ನೀಡಿ ರೂ.5 ಲಕ್ಷ ಪರಿಹಾರ ನೀಡಿದರು. ತುಂಗಾಭದ್ರ ನದಿ ನೀರಿನ ಹರಿವು ಹೆಚ್ಚಳವಾದ ಹಿನ್ನಲೆಯಲ್ಲಿ ಉಕ್ಕಡಗಾತ್ರಿ, ಪತ್ಯಾಪುರ ರಸ್ತೆ ಸಂಪರ್ಕ ಕಡಿತವಾಗಿದ್ದು, ಜಿಲ್ಲಾಧಿಕಾರಿ ಶಿವಾನಂದ ಕಾಪಾಶಿ ಮಂಗಳವಾರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅತಿಯಾದ ಮಳೆಯಿಂದಾಗಿ ಹರಿಹರ ತಾಲ್ಲೂಕಿನ ತಿಮ್ಮಿನಕಟ್ಟೆ ಗ್ರಾಮದಲ್ಲಿ ಕೃಷಿ ಜಮೀನುಗಳು ಜಲಾವೃತ ಗೊಂಡಿದ್ದು ಮಳೆಹಾನಿ ಸ್ಥಳಗಳಿಗೆ ಜಿಲ್ಲಾಧಿಕಾರಿಗಳು ಭೇಟಿ ಪರಿಶೀಲಿಸಿದರು. ಈ ವೇಳೆ ಹರಿಹರ ತಹಶೀಲ್ದಾರ್ ಪೃಥ್ವಿ ಸ್ಥಾನಿಕಂ, ಮಲೆಬೆನ್ನೂರು ಉಪತಹಶೀಲ್ದಾರ್ ರವಿ, ಹಾಗೂ ದೇವಸ್ಥಾನದ ಸದಸ್ಯರು ಇದ್ದರು.

### ವಿಶ್ವ ಪರಿಸರ ದಿನ: ಚಿತ್ರಕಲಾ ಸ್ಪರ್ಧೆ

» **ದಾವಣಗೆರೆ**

ವಿಶ್ವ ಪರಿಸರ ಸಂರಕ್ಷಣಾ ದಿನದ ಅಂಗವಾಗಿ ಜುಲೈ 28 ರಂದು ಬೆಳಿಗ್ಗೆ 10 ಗಂಟೆಗೆ ವಿನೋಬನಗರ ದಲ್ಲಿರುವ ಶ್ರೀ ಜಗದ್ಗುರು ಮುರುಘರಾಜೇಂದ್ರ ಪ್ರೌಢಶಾಲೆಯಲ್ಲಿಚಿತ್ರಕಲಾಸ್ಪರ್ಧೆ ಏರ್ಪಡಿಸಲಾಗಿದೆ. ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ, ಹಳುಪಿನಕಟ್ಟೆ, ಆನಗೋಡು ಹಾಗೂ ಶಾಲಾ ಶಿಕ್ಷಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರಕೃತಿ ರಕ್ಷಿಸಿ ಜೀವ ಸಂಕುಲ ಉಳಿಸಿ ವಿಷಯದ ಕುರಿತು ಚಿತ್ರಕಲಾ ಸ್ಪರ್ಧೆಯನ್ನು ಏರ್ಪಡಿಸಿದ್ದು, ವಿಜೇತ ವಿದ್ಯಾರ್ಥಿಗಳಿಗೆ ನಗದು ಹಾಗೂ ಪ್ರಶಸ್ತಿ ಪತ್ರ ವಿತರಿಸಲಾಗುವುದು.

### 25ನೇ ವಿಶ್ವ ಸ್ಕೌಟ್ ಜಾಂಬೂರಿಯಲ್ಲಿ ದಾವಣಗೆರೆ ಶ್ರೀರಕ್ಷ

» **ದಾವಣಗೆರೆ**

ದಕ್ಷಿಣ ಕೋರಿಯ ದೇಶದಲ್ಲಿ ಆಗಸ್ಟ್ 1ರಿಂದ 12ರ ವರೆಗೆ ನಡೆಯಲಿರುವ 25ನೇ ವಿಶ್ವ ಸ್ಕೌಟ್ ಜಾಂಬೂರಿಯಲ್ಲಿ ದಾವಣಗೆರೆ ಜಿಲ್ಲೆಯಿಂದ ಶ್ರೀ ತರಳಬಾಳು ಜಗದ್ಗುರು ಶಾಲೆಯ ವಿದ್ಯಾರ್ಥಿನಿ ಗೈಡ್ ಶ್ರೀರಕ್ಷ ಕೆ. ಭಾಗವಹಿಸಲಿದ್ದಾರೆ. ಜಾಂಬೂರಿಯಲ್ಲಿ ಅಂತರಾಷ್ಟ್ರೀಯ ಸೇವಾ ತಂಡದ ಸದಸ್ಯರಾಗಿ ಹರಿಹರದ ಸೆಂಟ್ ಮೇರಿಸ್ ಕಾನ್ವೆಂಟ್ ಶಾಲೆಯ ಹಿರಿಯ ವಿದ್ಯಾರ್ಥಿ ವಿಜಯ್ ಕುಮಾರ್ ಬಿ.ಪಿ ಹಾಗೂ ಮೇಳದಲ್ಲಿ ವಿಶ್ವದಾದ್ಯಂತ 216 ದೇಶಗಳಿಂದ ಸ್ಕೌಟ್ ಗೈಡ್ ಮಕ್ಕಳು ವಿವಿಧ ಸಾಂಸ್ಕೃತಿಕ ಮತ್ತು ಕೌಶಲ್ಯಾಧಾರಿತ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು.

### ಮಳೆ ವಿವರ

» **ದಾವಣಗೆರೆ**

ಜಿಲ್ಲೆಯಲ್ಲಿ ಜುಲೈ 23 ರಂದು ಬಿದ್ದ ಮಳೆಯ ವಿವರದನ್ವಯ 11.4 ಮಿ.ಮೀ. ಸರಾಸರಿ ಮಳೆಯಾಗಿದ್ದು, ರೂ. 11.38 ಲಕ್ಷ ರೂ. ಅಂದಾಜು ನಷ್ಟ ಸಂಭವಿಸಿದೆ. ತಾಲ್ಲೂಕುವಾರು ಮಳೆ ಹಾಗೂ ಹಾನಿ ವಿವರ ಈ ಕೆಳಕಂಡಂತಿದೆ. ಚನ್ನಗಿರಿಯಲ್ಲಿ ವಾಡಿಕೆ ಮಳೆ 7.1 ಮಿ.ಮೀ ಹಾಗೂ ವಾಸ್ತವ ಮಳೆ 14.8 ಮಿ.ಮೀ, ದಾವಣಗೆರೆ ತಾಲ್ಲೂಕಿನಲ್ಲಿ ವಾಡಿಕೆ ಮಳೆ 1.5 ಮಿ.ಮೀ ಹಾಗೂ ವಾಸ್ತವ ಮಳೆ 6.0 ಮಿ.ಮೀ, ಹರಿಹರದಲ್ಲಿ ವಾಡಿಕೆ ಮಳೆ 1.9 ಮಿ.ಮೀ ಹಾಗೂ ವಾಸ್ತವ ಮಳೆ 4.4 ಮಿ.ಮೀ, ಹೊನ್ನಾಳಿ ವಾಡಿಕೆ ಮಳೆ 3.8 ಮಿ.ಮೀ ಹಾಗೂ ವಾಸ್ತವ ಮಳೆ 10.8 ಮಿ.ಮೀ, ಜಗಳೂರು ವಾಡಿಕೆ ಮಳೆ 2.3 ಮಿ.ಮೀ ಹಾಗೂ ವಾಸ್ತವ ಮಳೆ 12.7 ಮಿ.ಮೀ, ನ್ಯಾಮತಿಯಲ್ಲಿ ವಾಡಿಕೆ ಮಳೆ 5.7 ಮಿ.ಮೀ ಹಾಗೂ ವಾಸ್ತವ ಮಳೆ 20.4 ಮಿ.ಮೀ ಮಳೆಯಾಗಿದೆ. ದಾವಣಗೆರೆ ತಾಲ್ಲೂಕು ವ್ಯಾಪ್ತಿಯಲ್ಲಿ 9 ಮನೆಗಳು ಭಾಗಶಃ ಹಾನಿಯಾಗಿದ್ದು ರೂ. 2.70 ಲಕ್ಷ ಅಂದಾಜು ನಷ್ಟ ಸಂಭವಿಸಿದೆ. ಹರಿಹರ ತಾಲ್ಲೂಕು ವ್ಯಾಪ್ತಿಯಲ್ಲಿ 1 ಮನೆ ಪೂರ್ಣ ಹಾನಿಯಾಗಿದ್ದು ರೂ. 0.2 ಸಾವಿರ ಅಂದಾಜು ನಷ್ಟ ಹಾಗೂ 1 ಮನೆ ಭಾಗಶಃ ಹಾನಿಯಾಗಿದ್ದು ರೂ.0.30 ಸಾವಿರ ಅಂದಾಜು ನಷ್ಟ ಸಂಭವಿಸಿದೆ ಹಾಗೂ 1 ಜೀವಹಾನಿಯಾಗಿದ್ದು, ವಾರಸುದಾರರಿಗೆ 5 ಲಕ್ಷ ಪರಿಹಾರ ನೀಡಲಾಗಿದೆ.ಜಗಳೂರು ತಾಲ್ಲಕು ವ್ಯಾಪ್ತಿಯಲ್ಲಿ 2 ಮನೆಗಳು ಭಾಗಶಃ ಹಾನಿಯಾಗಿದ್ದು ರೂ. 0.13 ಸಾವಿರ ಅಂದಾಜು ನಷ್ಟ ಸಂಭವಿಸಿದೆ. ಹೊನ್ನಾಳಿ ತಾಲ್ಲೂಕು ವ್ಯಾಪ್ತಿಯಲ್ಲಿ 1 ಮನೆ ಭಾಗಶಃ ಹಾನಿಯಾಗಿದ್ದು ರೂ. 0.25 ಸಾವಿರ ಅಂದಾಜು ನಷ್ಟ ಸಂಭವಿಸಿರುತ್ತದೆ.

# ಕ್ರೀಡೆಗಳು ಮಕ್ಕಳ ಸದೃಢತೆಗೆ ಸಹಕಾರಿ: ಶಾಸಕ

» **ಹೊಸದುರ್ಗ**

ಮಕ್ಕಳು ಮಾನಸಿಕವಾಗಿ, ದೈಹಿಕವಾಗಿ ಸದೃಢರಾಗಿ ಬೆಳೆಯಬೇಕಾದರೆ, ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳು ಮುಖ್ಯವಾದವುಗಳಾಗಿವೆ. ಹಾಗಾಗಿ, ಮಕ್ಕಳು ವಿದ್ಯಾಭ್ಯಾಸದ ಸಮಯದಲ್ಲಿ ಓದಿನ ಜೊತೆಗೆ ಆಟಗಳಲ್ಲಿ ಪಾಲ್ಗೊಳ್ಳುವುದರಿಂದ ಸರ್ವತೋಮುಖವಾಗಿ ಬೆಳವಣಿಗೆ ಕಾಣಲು ಸಾಧ್ಯವಾಗುತ್ತದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಹೇಳಿದರು.

ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಮಂಗಳವಾರ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಆಯೋಜಿಸಿದ್ದ 2023 –24 ನೇ ಸಾಲಿನ ತಾಲೂಕಿನ ಹೋಬಳಿ ಮಟ್ಟದ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಕ್ರೀಡಾಕೂಟವನ್ನು ಧ್ವಜಾರೋಹಣ ನೆರವೇರಿಸಿ ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡೆಯೆಂದ ಮೇಲೆ ಸೋಲು ಗೆಲುವು ಇರಲೇಬೇಕು. ಆಟದಲ್ಲಿ ಭಾಗವಹಿಸುವ ಎಲ್ಲ ವಿದ್ಯಾರ್ಥಿಗಳು ಗೆಲುವು ಪಡೆಯಲು ಸಾಧ್ಯವಿಲ್ಲ. ಆಟಗಳಲ್ಲಿ ಗೆದ್ದಂತಹ ವಿದ್ಯಾರ್ಥಿಗಳಿಗೆ ಉಳಿದ ವಿದ್ಯಾರ್ಥಿಗಳು



ಕೈಜೋಡಿಸಿ, ಪ್ರೋತ್ಸಾಹಿಸುವ ಮೂಲಕ ಹೊಸದುರ್ಗದ ಕೀರ್ತಿಯನ್ನು ಜಿಲ್ಲಾ, ರಾಜ್ಯ, ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಬೆಳಗಿಸಬೇಕು. ಸೋಲೆ ಗೆಲುವಿನ ಮೆಟ್ಟಿಲು, ಸೋಲು ನಮ್ಮ ವೈಫಲ್ಯ, ಸರಿದಾರಿಯ ಬಗ್ಗೆ ಅರಿವು ಮೂಡಿಸುತ್ತದೆ. ನಿರಂತರ ಸೋಲು ನಮ್ಮನ್ನು ಮತ್ತಷ್ಟು ಗಟ್ಟಿಗೊಳಿಸಿ ಒಂದು ದಿನ ಗೆಲುವಿನ ದಡಕ್ಕೆ ಸೇರಿಸುತ್ತದೆ. ಆಟಗಳನ್ನು ಆರೋಗ್ಯಕರವಾಗಿ ತೆಗೆದುಕೊಂಡು ಒಂದು ಸ್ಪರ್ಧೆಯೆಂದು ಭಾವಿಸಿ, ಕ್ರೀಡೆಗಳಲ್ಲಿ ಪಾಲ್ಗೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ತಾಲೂಕಿನಲ್ಲಿ ಶಿಕ್ಷಕರ ಕೊರತೆ ಇದ್ದು, ಈಗಿರುವ ಶಿಕ್ಷಕರನ್ನು ಬೇರೆ ಕಡೆ ವರ್ಗಾವಣೆ ಮಾಡದಂತೆ ಶಿಕ್ಷಕರ ಸಂಘದ ವತಿಯಿಂದ ನನಗೆ ಮನವಿ ಪತ್ರ ನೀಡಲಾಗಿತ್ತು. ಆದರೆ, ಸರ್ಕಾರದ ನಿಯಮವನ್ನು ಎಲ್ಲರೂ ಪಾಲಿಸಲೇ ಬೇಕಾಗಿರುವುದರಿಂದ ಕೆಲವರು ವರ್ಗಾವಣೆಗೊಂಡಿದ್ದಾರೆ. ತಾಲೂಕಿನಲ್ಲಿರುವ ಶಿಕ್ಷಕರ ಕೊರತೆಯ ಬಗ್ಗೆ ಶಿಕ್ಷಣ ಸಚಿವರೊಂದಿಗೆ ಚರ್ಚೆ ನಡೆಸಿ, ಸರಿಪಡಿಸಲಾಗುವುದು. ಒಬ್ಬ ಶಿಕ್ಷಕ ನೂರಾರು ಮಕ್ಕಳ ಭವಿಷ್ಯವನ್ನು ರೂಪಿಸಬಲ್ಲ. ಹಾಗಾಗಿ ಶಿಕ್ಷಕ ವೃತ್ತಿಯಲ್ಲಿರುವವರು ಪ್ರಾಮಾಣಿಕವಾಗಿ ನಿಮ್ಮ ಕಾರ್ಯವನ್ನು ನಿರ್ವಹಿಸಿ ಎಂದು ತಿಳಿಸಿದರು.

ಈ ವೇಳೆ ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್, ಕ್ಷೇತ್ರ ಸಂಪನ್ಮೂಲ ಅಧಿಕಾರಿ ಶ್ರೀನಿವಾಸ್, ದೈಹಿಕ ಶಿಕ್ಷಣ ಪರಿವೀಕ್ಷಕ ಶ್ರೀನಿವಾಸ್, ಸರ್ಕಾರಿ ನೌಕರರ ಸಂಘದ ತಾಲೂಕು ಘಟಕದ ಅಧ್ಯಕ್ಷ ಆರ್. ಲಕ್ಕಯ್ಯ, ಯುವಜನ ಸೇವೆ ಹಾಗೂ ಕ್ರೀಡಾಧಿಕಾರಿ ಮಹಾಂತೇಶ್, ಜಿಲ್ಲಾ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ನಾಗೇಂದ್ರಪ್ಪ ಮತ್ತು ಬಡ್ತಿ ಮುಖ್ಯ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ಗುತ್ತಿಕಟ್ಟೆ ಪ್ರಕಾಶ್ ಸೇರಿದಂತೆ ತಾಲ್ಲೂಕಿನ ಕೆಲವು ಶಾಲೆಗಳ ಮುಖ್ಯೋಪಾಧ್ಯಾಯರು, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಹೆಣ್ಣುಮಕ್ಕಳ ಮೇಲೆ ದೌರ್ಜನ್ಯ ಖಂಡಿಸಿ ಪ್ರತಿಭಟನೆ

» **ಚಿತ್ರದುರ್ಗ**

ರಾಜ್ಯದ ಹಾಗೂ ದೇಶದ ಹೆಣ್ಣು ಮಕ್ಕಳಿಗೆ ರಕ್ಷಣೆ ನೀಡಲು ಸಾಧ್ಯವಾಗದಿರುವ ರಾಜಕಾರಣಿಗಳು ಸ್ವಯಂ ಪ್ರೇರಿತವಾಗಿ ರಾಜೀನಾಮೆ ನೀಡುವಂತೆ ಎಚ್ಚರ ನೀಡಬೇಕಾಗಿ, ರಾಜ್ಯಪಾಲರಲ್ಲಿ ಕರ್ನಾಟಕ ಭೀಮ ಸೇನೆ ಸಂಘಟನೆ ವತಿಯಿಂದ ಮನವಿ ಮಾಡಲಾಯಿತು.

ನಗರದ ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೂ ಪ್ರತಿಭಟನೆಯನ್ನು ನಡೆಸಿ ರಾಜ್ಯದಲ್ಲಿ ಹಾಗೂ ದೇಶದಲ್ಲಿ ಹೆಣ್ಣುಮಕ್ಕಳ ಮೇಲೆ ನಡೆಯುತಿರುವ ದೌರ್ಜನ್ಯವನ್ನು ಖಂಡಿಸಿ ಇಂದು ಬೃಹತ್ ಪ್ರತಿಭಟನಾ ಧರಣಿ ಮಾಡುವ ಮೂಲಕ ದೂರು ನೀಡಲಾಯಿತು. ಸುಮಾರು ವರ್ಷಗಳಿಂದ ನಮ್ಮ ರಾಜ್ಯದಲ್ಲಿ ಹಾಗೂ ದೇಶದಲ್ಲಿ ಹೆಣ್ಣು ಮಕ್ಕಳ ಮೇಲೆ ಅತ್ಯಾಚಾರ ಕೊಲೆ ಮಾಡುತ್ತಾ ಬಂದಿದ್ದಾರೆ. ಅದರಲ್ಲೂ ಹಿಂದುಳಿದ ವರ್ಗದ ಹೆಣ್ಣು ಮಕ್ಕಳನ್ನು (ಪ್ರೀತಿ ಹೆಸರಿನಲ್ಲಿ ಮೋಸ ಮಾಡಿ) ನಮ್ಮ ಮನೆಯಲ್ಲಿ ಜಾತಿ ಸಮಸ್ಯೆ ಎಂದು ಅವರನ್ನು ಉಪಯೋಗಿಸಿ ಬಿಟ್ಟು ಹೋಗಿರುತ್ತಾರೆ. ಅಲ್ಲದೆ, ಹೀನಾಯವಾಗಿ ನೀಚ ಕೃತ್ಯಗಳನ್ನು, ಎಸಗಿದ್ದಾರೆ. ಮೊನ್ನೆ ಆ ರಾಜ್ಯದಲ್ಲಿ ಮೂರು ಹೆಣ್ಣು ಮಕ್ಕಳ ಮೇಲೆ ಅತ್ಯಾಚಾರ ಮಾಡಿ ಕೊಲೆ ಮಾಡಲಾಗಿದೆ. ಹಾಗೂ ಮಣಿಪುರದ ಇಬ್ಬರು ಮಹಿಳೆಯರನ್ನು ಬೆತ್ತಲೆಗೊಳಿಸಿ ರಸ್ತೆಯಲ್ಲಿ ಮೆರವಣಿಗೆ ನಡೆಸಿ, ಲೈಂಗಿಕ ದೌರ್ಜನ್ಯ




ಎಸಗಲಾಗಿದೆ. ಮಹಿಳೆಯ ಮೇಲೆ ಅತ್ಯಾಚಾರ ಮಾಡಲಾಗಿದೆ ಎಂದು ಅಮೇರಿಕನ್ ಮಣಿಪುರ ಟ್ರೈಬ ಅಸೋಸಿಯೇಷನ್' ಎಂಬ ಸಂಸ್ಥೆಯು ರಾಷ್ಟ್ರೀಯ ಮಹಿಳಾ ಆಯೋಗಕ್ಕೆ ದೂರು ನೀಡಿ ಆದರೆ ಮಹಿಳಾ ಆಯೋಗವು ದೂರು ತಲುಪಿದ 35 ದಿನಗಳ ಬಳಿಕವೂ ಯಾವುದೇ ಕ್ರಮ ಕೈಗೊಂಡಿಲ್ಲ ವಿಡಿಯೋ ಬಹಿರಂಗವಾದ ಬಳಿಕವಷ್ಟೇ ಕ್ರಮ ಕೈಗೊಳ್ಳುವುದಕ್ಕೆ ಈ ವಿಚಾರವಾಗಿ ಈ ಘಟನೆಗಳ ವಿರುದ್ಧವಾಗಿ, ರಾಜ್ಯದ ಹೆಣ್ಣು ಮಕ್ಕಳ ಮೇಲಿನ ಈ ದೌರ್ಜನ್ಯ ವಿರುದ್ಧವಾಗಿ, ನಮ್ಮ ಕರ್ನಾಟಕ ಭೀಮ್ ಸೇನ ಸಂಘಟನೆ ವತಿಯಿಂದ ಪ್ರತಿಭಟನಾ ಹೋರಾಟ ಮಾಡುವ ಮೂಲಕ ಈ ದೂರನ್ನು ನೀಡಲಾಗಿದೆ.

ತಾವುಗಳು ನಮ್ಮ ದೂರನ್ನು ಹಾಗೂ ಮನವಿಯನ್ನು ಗಂಭೀರವಾಗಿ ಪರಿಗಣಿಸಿ ಆರೋಪಿಗಳಿಗೆ ಶಿಕ್ಷೆಯಾಗುವ ಹಾಗೆ ಮತ್ತು ಇನ್ನೆಲ್ಲಾ ಕೃತ್ಯ ನಡೆದ ಕಣ್ಣು ಕಾಣದ ಹಾಗೆ ಮೂಕರಂತೆ ಇರುವ ರಾಜಕಾರಣಿಗಳು, ರಾಜ್ಯದ ಹಾಗೂ ದೇಶದ ಹೆಣ್ಣು ಮಕ್ಕಳಿಗೆ ಸಂರಕ್ಷಣೆ ನೀಡಲು ಸಾಧ್ಯವಾಗದಿರುವ ರಾಜಕಾರಣಿಗಳು ಸ್ವಯಂ ಪ್ರೇರಿತವಾಗಿ ರಾಜೀನಾಮೆ ನೀಡುವಂತೆ ಎಚ್ಚರ ನೀಡಬೇಕಾಗಿ, ರಾಜ್ಯಪಾಲರಲ್ಲಿ ಕರ್ನಾಟಕ ಭೀಮ' ಸೇನ ಸಂಘಟನೆ ವತಿಯಿಂದ ತಮ ಮನವಿ ಮಾಡಲಾಯಿತು.ಈ ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ರಮೇಶ್ ಎನ್ ಮಸ್ಕಲ್ ಮಟ್ಟಿ, ತಾಲ್ಲೂಕು ಅಧ್ಯಕ್ಷ ನಿಂಗರಾಜು, ಇದ್ದರು.

## ಹಿಂದೂ ಮತ್ತು ಮುಸ್ಲಿಂ ಬಂಧುಗಳ ಸಮಾನತೆ ಸಂದೇಶ ನೀಡುವ ಮೊಹರಂ



» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ಜುಲೈ 29ರ ಶನಿವಾರ ಮೊಹರಂ ಹಬ್ಬ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆ ವತಿಯಿಂದ ಶಾಂತಿ ಸಭೆಯನ್ನು ನಡೆಸಲಾಯಿತು. ಸಭೆಯ ಅಧ್ಯಕ್ಷತೆ ವಹಿಸಿದ್ದ ಪಿಎಸ್ಐ ಶಿವರಾಜು ಮಾತನಾಡಿ, ಮೊಹರಂ ಹಬ್ಬ ಹಿಂದೂ ಮತ್ತು ಮುಸ್ಲಿಂ ಸಮಾಜದ ಬಂಧುಗಳ ಶಾಂತಿಯ ಸಂಕೇತವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ನಗರಸಭಾ ಸದಸ್ಯ ವೈ.ಪ್ರಕಾಶ್ ಮಾತನಾಡಿ, ಕಳೆದ ಹಲವಾರು ದಶಕದಿಂದ ಚಳ್ಳಕೆರೆ ನಗರದಲ್ಲಿ ಮುಸ್ಲಿಂ ಸಮುದಾಯ ಆಚರಣೆ ಮಾಡುವ ಎಲ್ಲಾ ಹಬ್ಬಗಳಿಗೂ ಹಿಂದೂ ಸಮಾಜದ ಬಂಧುಗಳಿಂದ ಉತ್ತಮ ಸಹಕಾರ ಸಿಗುತ್ತಿದೆ. ಯಾವುದೇ ಕಾರಣಕ್ಕೂ ಯಾವುದೇ ಅಹಿತಕರ ಘಟನೆ ನಡೆಯದಂತೆ ಈ ಹಬ್ಬ ಆಚರಣೆ ಮಾಡಿಕೊಂಡು ಬರಲಾಗುತ್ತಿದೆ. ಎಲ್ಲರಲ್ಲೂ ಸಮಾನವಾದ ಭಾವನೆ ಇದೆ ಎಂದರು. ಸಭೆಯಲ್ಲಿ ಆಮ್ ಆದ್ಮಿ ಪಕ್ಷದ ಮುಖಂಡ ಪಾಪಣ್ಣ, ಉಮೇಶ್, ಗಂಗಾಧರ, ಕಾರೇರ ರಮೇಶ್, ಸುಧಾಕರ, ಸುರೇಶ್ ಮುಂತಾದವರು ಉಪಸ್ಥಿತರಿದ್ದರು.

# ಕಾಂಗ್ರೆಸ್, ಸಿಪಿಐ ತತ್ವ, ಸಿದ್ಧಾಂತ, ಒಂದೇ ನಾಣ್ಯದ 2 ಮುಖಗಳು

» **ದಾವಣಗೆರೆ**

ಕಮ್ಯೂನಿಷ್ಟ ಪಕ್ಷ ಹಾಗೂ ಕಾಂಗ್ರೆಸ್ ಪಕ್ಷದ ತತ್ವ ಮತ್ತು ಸಿದ್ಧಾಂತಗಳು ಒಂದೇ ನಾಣ್ಯದ 2 ಮುಖಗಳಿದ್ದಂತೆ, ಜಾತ್ಯಾತೀತ ತತ್ವ ಹೊಂದಿರುವ ಪಕ್ಷಗಳೆಂದರೆ ಅವು ಕಾಂಗ್ರೆಸ್, ಕಮ್ಯೂನಿಷ್ಟ ಪಕ್ಷಗಳು ಎಂದು ಮಾಯಕೊಂಡ ವಿಧಾನ ಸಭಾ ಕ್ಷೇತ್ರದ ಶಾಸಕ ಎಸ್.ಕೆ.ಬಸವಂತಪ್ಪ ಹೇಳಿದರು.

ನಗರದ ಅಶೋಕ ರಸ್ತೆಯಲ್ಲಿನ ಕಮ್ಯೂನಿಷ್ಟ್ ಪಕ್ಷದ ಕಚೇರಿಯಲ್ಲಿ ನಡೆದ ಅನೌಪಚಾರಿಕ ಸರಳ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಾನು ಬಡ ಕುಟುಂಬದಿಂದ, ಹೋರಾಟ ಮಾಡಿ ಜನರ ಸಮಸ್ಯೆಗಳಿಗೆ ಸ್ಪಂದಿಸಿ, ಈ ಹಂತಕ್ಕೆ ಅಂದರೆ ಶಾಸಕನಾಗಿ ಆಯ್ಕೆ ಆಗಿದ್ದೇನೆ.



ಜನರ ಸಂಕಷ್ಟಗಳಿಗೆ ಸ್ಪಂದಿಸಿದರೆ ಉತ್ತಮ ಸ್ಥಾನ ದೊರೆಯುವುದು ಶತಸಿದ್ಧ. ನನ್ನನ್ನು ಕೈ ಹಿಡಿದಿದ್ದಾರೆ. ಕ್ಷೇತ್ರದ ಜನತೆ ನನ್ನ ಕೈ ಹಿಡಿದಿದ್ದು, ಅವರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.ಭಾರತೀಯಕಮ್ಯೂನಿಷ್ಟ್‌ಪಾರ್ಟಿ ಹಾಗೂ ನಮ್ಮ ಸಂಬಂಧ ಅವಿನಾಭಾವ, ಪಂಪಾಪತಿ ಅವರ ಕಾಲದಿಂದಲೂ ನಾನು ಸಿಪಿಐ ಪಕ್ಷದ ಒಡನಾಟದಲ್ಲಿ ಇದ್ದೇನೆ. ಕಮ್ಯೂನಿಷ್ಟ್ ಪಾರ್ಟಿ ಎಂದು ಒಂದು ಕಾಲದಲ್ಲಿ ಶಿಸ್ತುಬದ್ಧ ಪಕ್ಷ ಎನ್ನುವಂತೆ ಇತ್ತು. ಯಾರಿಗೆ ಶಕ್ತಿ ಇಲ್ಲವೋ, ಯಾರಿಗೆ ಧ್ವನಿ ಇದ್ದಿಲ್ಲವೋ ಅವರಿಗೆ ಶಕ್ತಿ, ಧ್ವನಿ ನೀಡುವಂತ ಪಕ್ಷವಾಗಿತ್ತು. ಜನರ ಸಮಸ್ಯೆಗಳಿಗೆ ಸ್ಪಂದಿಸಿ, ಅವರ ಕಷ್ಟಗಳನ್ನು ಬಗೆಹರಿಸಿದ ಪಕ್ಷ ಕಮ್ಯೂನಿಷ್ಟ್ ಪಕ್ಷ ಎಂದು ಹೇಳಿದರು.

ಕಟ್ಟಡ ಕಾರ್ಮಿಕರ ರಾಜಾಧ್ಯಕ್ಷ ಆವರಗೆರೆ ಹೆಚ್.ಜಿ.ಉಮೇಶ್ ಮಾತನಾಡಿ, ಕಟ್ಟಡ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಕಾರ್ಮಿಕರಿಂದ ಪಡೆಯಲಾಗಿರುವ 4500ಕೋಟಿ ಹಣ ಇದೆ. ಅಲ್ಲಿ ಭ್ರಷ್ಟಾಚಾರ ನಡೆದಿದೆ. ಈ ಕುರಿತು ಕಾರ್ಮಿಕ ಮಂತ್ರಿಗಳ ಗಮನಕ್ಕೆ ತರಲಾಗಿದೆ. ಕೃಷಿ, ಹಮಾಲರು ಸೇರಿದಂತೆ ಎಲ್ಲಾ ವರ್ಗದ ಅಸಂಘಟಿತ ಕಾರ್ಮಿಕರ ಸೌಲಭ್ಯಕ್ಕಾಗಿ ಸೂಕ್ತ ಕ್ರಮ ಸರ್ಕಾರ ಕೈಗೊಳ್ಳಬೇಕೆಂದು ಆಗ್ರಹಿಸಿದರು.ಸಿಪಿಐ ಖಜಾಂಚಿ ಆನಂದರಾಜ್ ಮಾತನಾಡಿದರು. ಈ ವೇಳೆ ಆವರಗೆರೆ ಚಂದ್ರು, ಆವರಗೆರೆ ವಾಸು, ಶಾರದಮ್ಮ, ಸರೋಜ ಇದ್ದರು.

## ಪ್ರಮುಖ ಸುದ್ದಿ

### ಸರ್ಕಾರ ದೇವರ ಎತ್ತುಗಳಿಗೆ ಶಾಶ್ವತ ಮೇವು ವಿತರಣೆಗೆ ಮುಂದಾಗಲಿ

# ತಾಲ್ಲೂಕಿನ ದೇವರ ಎತ್ತುಗಳಿಗೆ ಮೇವು ವಿತರಣೆ

» **ಚಳ್ಳಕೆರೆ**

ತಾಲ್ಲೂಕಿನ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೊಮ್ಮದೇವರಹಟ್ಟಿ, ಅಜ್ಜಯ್ಯ ನಗುಡಿ ಬಳಿ ಇರುವ ದೇವರ ಎತ್ತುಗಳಿಗೆ ಪಾವಗಡದ ರಾಮಕೃಷ್ಣ ಸೇವಾಶ್ರಮ ಜಪಾನಂದಸ್ವಾಮೀಜಿ ಪ್ರತಿವರ್ಷದಂತೆ ಈ ವರ್ಷವೂ ಸಹ ದೇವರ ಎತ್ತುಗಳಿಗೆ ಉಚಿತವಾಗಿ ಮೇವು ವಿತರಣೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಸ್ವಾಮೀಜಿ ಬೆಂಗಳೂರಿನ ಸುಧಾಮೂರ್ತಿ ಫೌಂಡೇಷನ್‌ಮತ್ತು ರಾಮಕೃಷ್ಣ ಸೇವಾಶ್ರಮ ಆಶ್ರಯದಲ್ಲಿ ಉಚಿತವಾಗಿ ಮೇವು ವಿತರಣೆ ಮಾಡಲಾಗುತ್ತಿದೆ. ಇದರ ಜೊತೆಯಲ್ಲಿ ಮೊಳಕಾಲ್ಮೂರು ತಾಲ್ಲೂಕಿನ ಮುತ್ತಿಗಾರಹಳ್ಳಿ ಮತ್ತು ಕೂಡ್ಲಗಿ ತಾಲ್ಲೂಕಿನ ದೇವರ ಎತ್ತುಗಳಿಗೂ ಸಹ ಮೇವು ವಿತರಣೆ ಮಾಡಲಾಗಿದೆ. ಇತ್ತೀಚಿನ ದಿನಗಳಲ್ಲಿ ದೇವರ ಎತ್ತುಗಳಿಗೆ ಮೇವಿನ ಅಭಾವ ಹೆಚ್ಚಾದ ಬಗ್ಗೆ ಗೋಪಾಲಕರು, ಕಿಲಾರಿಗಳು ಮತ್ತು ಗ್ರಾಮಸ್ಥರ ಮನವಿಯಂತೆ ಉಚಿತವಾಗಿ





ಮೂರು ತಿಂಗಳ ಕಾಲ ಮೇವನ್ನು ವಿತರಣೆ ಮಾಡಲಾಗಿದೆ. ಯಾವುದೇ ಕಾರಣಕ್ಕೂ ದೇವರ ಎತ್ತುಗಳು ಹಸಿವಿನಿಂದ ಒದ್ದಾಡದಂತೆ ಕ್ರಮವಹಿಸಲಾಗಿದೆ. ಸರ್ಕಾರ ಮತ್ತು ಸ್ಥಳೀಯ ಚುನಾಯಿತ ಶಾಸಕ ಸಮಕ್ಷಮದಲ್ಲಿ ಚರ್ಚಿಸಿ ಮೇವು ಸರಬರಾಜು ಬಗ್ಗೆ ಮನವಿ ಮಾಡಿಕೊಳ್ಳಲಾಗಿದೆ. ಆದರೆ, ಸರ್ಕಾರದಿಂಧ ಇನ್ನೂ ಯಾವುದೇ ರೀತಿಯ ಸ್ಪಂದನೆಯಾಗದ ಕಾರಣ ಫೌಂಡೇಷನ್ ವತಿಯಿಂದಲೇ ಮೇವು ವಿತರಿಸಲಾಗಿದೆ. ಮುಂದಿನ ದಿನಗಳಲ್ಲಿ ಸಹ ಈ ವ್ಯವಸ್ಥೆ ಮುಂದುವರೆಯುತ್ತದೆ. ದೇವರ ಎತ್ತುಗಳಿಗೆ ಮೇವು ನೀಡುವ ಬಗ್ಗೆ ಶಾಸಕ ಟಿ.ರಘುಮುರ್ತಿ ವಿಧಾನಸೌಧ ಕಲಾಪದಲ್ಲಿ ಚರ್ಚೆ ಮಾಡಿದ್ದು ಸಂತಸ ತಂದಿದೆ. ಶಾಸಕರ ಮನವಿಯನ್ನು ಸರ್ಕಾರ ಕೂಡಲೇ ಪುರಸ್ಕರಿಸಬೇಕು ಎಂಬುವುದು ನನ್ನ ಬೇಡಿಕೆಯಾಗಿದೆ ಎಂದರು.

ಈ ಸಂದರ್ಭದಲ್ಲಿ ಸಿ.ಮಹೇಶ್‌ಕುಮಾರ್, ಸಿದ್ದೇಶ್, ಕಿಲಾರಿಗಳಾದ ಜೋಗಯ್ಯ, ಪಾಲಯ್ಯ, ಗಾದ್ರಿಪಾಲಯ್ಯ, ಪಾಪಯ್ಯ ಮುಂತಾದವರು ಉಪಸ್ಥಿತರಿದ್ದರು.

# ಶೈಕ್ಷಣಿಕ ಸಹಾಯಧನ ವಿಳಂಬ: ಪ್ರತಿಭಟನೆ

» ಚಿತ್ರದುರ್ಗ

ನೋಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಸಹಾಯಧನ ವಿಳಂಭ ಧೋರಣೆಯನ್ನು ಖಂಡಿಸಿ, ಚಿತ್ರದುರ್ಗ ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಕರ್ನಾಟಕ ರಾಜ್ಯ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ದೊರಕಬೇಕಾದ ನೊಂದಾಯಿತ ಕಟ್ಟಡ ಕಾರ್ಮಿರ ಮಕ್ಕಳ ಶೈಕ್ಷಣಿಕ ಸಹಾಧನ ತುರ್ತು ಮುಂಜೂರು ಮಾಡಬೇಕು. ನೊಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಸಹಾಧನ 2021-22ನೇ ಸಾಲಿನದ್ದು ಇಲ್ಲಿಯವರೆಗೂ ಮಂಜೂರು ಮಾಡಿರುವುದಿಲ್ಲ. ಕೂಡಲೇ ಪರಿಶೀಲಿಸಿ ಮಂಜೂರು ಮಾಡಬೇಕು. ಈಗಾಗಲೇ 2023ನೇ ಸಾಲಿನ ಶೈಕ್ಷಣಿಕ, ಶಿಕ್ಷಣ ಪ್ರಾರಂಭವಾಗಿ ರುವುದರಿಂದ ಕೂಡಲೆ ಸರ್ಕಾರ ಮಂಡಳಿಯ ಗಮನಕ್ಕೆ ತಂದು ಧನ ಸಹಾಯವನ್ನು ಮಂಜೂರು ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ನೊಂದಾಯಿತ ಕಟ್ಟಡ ಕಾರ್ಮಿಕನ ಮಕ್ಕಳ ಮದುವೆ ಸಹಾಯಧನವನ್ನು 1,00,000ಲಕ್ಷಕ್ಕೆ ಹೆಚ್ಚಿಸಬೇಕು. ನೋಂದಾಯಿತ ಕಟ್ಟಡ ಕಾರ್ಮಿಕ ಮಹಿಳೆಯು ಹೆರಿಗೆಯಾದ 6 ತಿಂಗಳ ಕಾಲ ತನ್ನ ಮಗುವಿನ ಪೋಷಣೆಯಲ್ಲಿ ತೊಡಗಿರುತ್ತಾಳೆ ಆದಕಾರಣ ಅಂತಹ ಮಹಿಳೆಗೆ ಪ್ರತ್ಯೇಕವಾಗಿ 60,000 ಸಾವಿರ ರೂ ಹಣವನ್ನು ಮಂಜೂರು ಮಾಡಬೇಕು. ಕಾರಣ ಈ ಹಿಂದೆ ಆದೇಶದ ಪ್ರತಿಯಲ್ಲಿ ಕೆಲವು ನಿಭಂದನೆಗಳಿದ್ದು, ತಾಯಿ&ಮಗುವಿನ ಹೆಸರಿನಲ್ಲಿ ಬಾಂಡ್ ಮಾಡಲಾಗಿರುತ್ತದೆ.

ಅದನ್ನು ಹೊರತು ಪಡಿಸಿ ಕಾರ್ಮಿಕ ಮಹಿಳೆಗೆ ಪ್ರತ್ಯೇಕವಾಗಿ 60.000 ಸಾವಿರ ರೂ ಸಹಾಯಧನ ನೀಡಿದಲ್ಲಿ ಕಾರ್ಮಿಕ ಮಹಿಳೆಗೆ ಅನುಕೂಲವಾಗುತ್ತದೆ ಎಂದಿದ್ದಾರೆ.

ನೋಂದಾಯಿತ ಕಟ್ಟಡ ಕಾರ್ಮಿಕನು 60 ವರ್ಷ ಪೂರೈಸಿದ ನಂತರ ಪಡೆಯಿತ್ತಿರುವ 3000ಸಾವಿರ ಬದಲಾಗಿ ಪಿಂಚಣಿ ಸೌಲಭ್ಯವನ್ನು 5000ಸಾವಿರ ರೂಗಳಿಗೆ ಹೆಚ್ಚಿಸಬೇಕು. ನೋಂದಾಯಿತ ಕಟ್ಟಡ ಕಾರ್ಮಿಕನ ಸಹಜ ಸಾವಿನ ಮರಣಕ್ಕೆ 2,00,000ಲಕ್ಷದವರೆಗೆ ಮರಣ ಸಹಾಯಧನವನ್ನು ಹೆಚ್ಚಿಗೆ ಮಾಡಬೇಕು. ನೊಂದಾಯಿತ ಕಟ್ಟಡ ಕಾರ್ಮಿಕನು ಕೆಲಸಕ್ಕೆ ಹೊಗುವ ಮಾರ್ಗ ಮಧ್ಯೆ ಅಥವಾ ಕೆಲಸ ಮುಗಿಸಿ ಮನೆಗೆ ಹೋಗುವ ಮಾರ್ಗ ಮಧ್ಯೆ ಹಾಗೂ ಬಿಲ್ಡಿಂಗ್ ಸೆಂಟ್ರಿಂಗ್ ಕುಸಿತ ಇತ್ಯಾದಿ ಅವಘಡ ಸಂಭವಿಸಿ ದುರ್ಮರಣ ಹೊಂದಿದ ಫಲಾನುಭವಿಗೆ 10,00,000 ಸಹಾಯ ಧನ ನೀಡಬೇಕು.

ನೊಂದಾಯಿತ ಕಟ್ಟಡ ಕಾರ್ಮಿಕನು ಮಳೆ,ಚಳಿ,ಗಾಳಿ ಎನ್ನದೆ ಕಟ್ಟಡ ನಿರ್ಮಾಣದಲ್ಲಿ ತೊಡಗಿಕೊಂಡಿರುತ್ತಾರೆ. ಆದ ಕಾರಣ ಕಾರ್ಮಿಕರ ಆರೋಗ್ಯದ ಮುನ್ನಚ್ಚರಿಕೆ ಇ.ಎಸ್.ಐ ಸೌಲಭ್ಯ ನೀಡಬೇಕು. ಕಟ್ಟಡ ಕಾರ್ಮಿಕನು ಕೂಲಿ ಮಾಡಿದ ಹಾಜರಾತಿವಂತಿಕೆ ಹಾಗೂ ಹಣದ ವಂತಿಕೆಯನ್ನು ಮಂಡಳಿಗೆ ನೋಂದಾಯಿಸಲಾಗುವುದಿಲ್ಲ ಏಕೆಂದರೆ ವಾರಕ್ಕೆ ಒಂದು ಕಡೆ ಕೆಲಸಮಾಡುವುದರಿಂದ ವಂತಿಕೆ: ಪಾವತಿ ಮಾಡಲು ಕಷ್ಟವಾಗುತ್ತದೆ&ಮಂಡಳಿ ಈ ಕಾಯ್ದೆಯನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ಚಿತ್ರದುರ್ಗ ಜಿಲ್ಲಾದ್ಯಾಂತ 1,60,000 ಸಾವಿರಕ್ಕಿಂತ ಹೆಚ್ಚು ಕಾರ್ಮಿಕರು ಮಂಡಳಿಯಲ್ಲಿ ನೋಂದಣಿ ಮಾಡಿಕೊಂಡಿದ್ದು ಚಿತ್ರದುರ್ಗ ತಾಲ್ಲೂಕು ಹೆಡ್ ಕ್ವಾಟರ್‌ನಲ್ಲಿ 45000 ಸಾವಿರ ಕಟ್ಟಡ ಕಾರ್ಮಿಕರು ನೋಂದಾಯಿಸಿಕೊಂಡಿರುತ್ತಾರೆ. 2008&2015ನೇ ಸಾಲಿನ ನೋಂದಾಯಿತ ಕಟ್ಟಡಕಾರ್ಮಿಕರಿಗೆ ಮಂಡಳಿಯು ಸರ್ಕಾರದವತಿಯಿಂದ ಚಿತ್ರದುರ್ಗ ನಗರದಲ್ಲಿ ಎಲ್ಲಾದರು ಒಂದು ಕಡೆ ಜಮೀನು ಖಂಧಿಸಿ ಕಟ್ಟಡ ಕಾರ್ಮಿಕರಿಗೆ 204300 ಅಳತೆಯ ನೀವೇಶನ ನೀಡಿ ಕಟ್ಟಡ ಕಾರ್ಮಿಕರ ಕಾಲೋನಿ ಎಂದು ಹೆಸರಿಡಬೇಕು ಎಂದು ಆಗ್ರಹಿಸಲಾಯಿತು.

ಜಿಲ್ಲಾಧ್ಯಕ್ಷ ವೈ.ತಿಪ್ಪೇಸ್ವಾಮಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗರಾಜ್, ತಾಲ್ಲೂಕು ಅಧ್ಯಕ್ಷ ಜಾವಿದ್ ಬಾಷ, ಜಿಲ್ಲಾ ಮಹಿಳಾ ಪ್ರಧಾನ ಕಾರ್ಯದರ್ಶೀ ಲಕ್ಷ್ಮೀದೇವಿ, ಜಿಲ್ಲಾ ಖಂಜಾಚಿ ಅಶೋಕ್, ಜಂಟಿ ಕಾರ್ಯದರ್ಶಿ ರಾಜು, ಗ್ರಾಮಾಂತರ ಕಾರ್ಯದರ್ಶಿ ತಿಪ್ಪೇಸ್ವಾಮಿ, ತಾಲ್ಲೂಕು ಕಾರ್ಯದರ್ಶೀ ಮನ್ಸೂರ್ ಭಾಷ, ರಾಜು, ಸಂಚಾಲಕರಾದ ಈರೇಶ್ ಪಿ ಕಲ್ಲಹಳ್ಳಿ, ಸಹಾ ಸಂಚಾಲಕರಾದ ಚಳ್ಳಕೆರಪ್ಪ, ಸಂಘಟನಾ ಕಾರ್ಯದರ್ಶಿ ನಾಗಭೂಷಣ, ಹೊಳಲ್ಕೆರೆ ತಾಲ್ಲೂಕು ಅಧ್ಯಕ್ಷ ಅಂಜನಪ್ಪ ಸೇರಿದಂತೆ ಇತರರು ಭಾಗವಹಿಸಿದ್ದರು.




## ಫಾಸ್ಟ್ ನ್ಯೂಸ್

### ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

» ದಾವಣಗೆರೆ

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ ನಗರದ ಪಶು ಆಸ್ಪತ್ರೆ ಅವರಣದಲ್ಲಿರುವ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಜುಲೈ 27 ಮತ್ತು 28 ರಂದು ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿಯನ್ನು ಆಯೋಜಿಸಿದೆ. ತರಬೇತಿಗೆ ಹಾಜರಾಗುವ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರ ಜೆರಾಕ್ಸ್ ತರಬೇಕು. ತರಬೇತಿಯಲ್ಲಿ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ ದಾವಣಗೆರೆ ದೂ. 08192-233787 ಗೆ ಸಂಪರ್ಕಿಸಬಹುದೆಂದು ಮುಖ್ಯ ಪಶು ವೈದ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವೀರಶೈವ ಲಿಂಗಾಯಿತ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ 30ರಂದು ಪ್ರತಿಭಾಪುರಸ್ಕಾರ

» ಚಳ್ಳಕೆರೆ

ತಾಲ್ಲೂಕಿನ ವೀರಶೈವ ಲಿಂಗಾಯತ ನೌಕರರ ಕ್ಷೇಮಾಭಿವೃದ್ಧಿ ಸಂಘ, ವೀರಶೈವ ಸಮಾಜಸೇವಾ ಸಂಘ, ತಾಲ್ಲೂಕು ವೀರಶೈವ ಸಂಘಟನೆಗಳ ಒಕ್ಕೂಟದ ವತಿಯಿಂದ ವೀರಶೈವ ಸಮಾಜದ ವಿದ್ಯಾರ್ಥಿಗಳ ಪ್ರತಿಭಾಪುರಸ್ಕಾರ ಹಾಗೂ ನಿವೃತ್ತ ನೌಕರರ ಸನ್ಮಾನ ಸಮಾರಂಭವನ್ನು ಜುಲೈ 30ರ ಭಾನುವಾರ ಬೆಳಗ್ಗೆ 10.30ಕ್ಕೆ ವೀರಶೈವ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದೆ ಎಂದು ಲಿಂಗಾಯತ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಸಿ.ಗುರುಸಿದ್ದಮೂರ್ತಿ ತಿಳಿಸಿದ್ದಾರೆ.

ಅವರು, ಪತ್ರಿಕೆಗೆ ಮಾಹಿತಿ ನೀಡಿ, ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಪಾಲ್ತೂರು ಸಂಸ್ಥಾನ ಕಲ್ಮೊಳೆ ಮಠದ ಚನ್ನವೀರಶಿವಚಾರ್ಯ ಮಹಾಸ್ವಾಮಿಗಳು ವಹಿಸುವರು, ಕಾರ್ಯಕ್ರಮವನ್ನು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಉದ್ಘಾಟಿಸುವರು. ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರವನ್ನು ಜಿಲ್ಲಾ ಉಸ್ತುವಾರಿ ಸಚಿವ, ಯೋಜನಾ ಮತ್ತು ಸಾಂಖಿಕ ಸಚಿವರಾದ ಡಿ.ಸುಧಾಕರ ನೆರವೇರಿಸುವರು. ನಿವೃತ್ತ ನೌಕರರಿಗೆ ಸನ್ಮಾನವನ್ನು ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ನಡೆಸಿಕೊಡುವರು.

ವೀರಶೈವ ಸಮಾಜ ಸೇವಾ ಸಂಘದ ಅಧ್ಯಕ್ಷ ಕೆ.ಸಿ.ನಾಗರಾಜು, ಎಸ್.ತಾಳಿಕೇರಪ್ಪ, ಕೆಎಎಸ್ ಅಧಿಕಾರಿ ಟಿ.ಎಸ್.ಕುಮುದಾಅನಿಲ್‌ಕುಮಾರ್, ವಿಶೇಷ ಅತಿಥಿಗಳಾಗಿ ಭಾಗವಹಿಸುವರು. ವಾಣಿಜ್ಯೋದ್ಯಮಿ ಎಸ್.ರುದ್ರಮುನಿಯಪ್ಪ, ಜಿಲ್ಲಾ ಛೇಂಬರ್ ಅಧ್ಯಕ್ಷ ಎನ್.ಸತೀಶ್‌ಬಾಬು, ಛೇಂಬರ್ ಕಾರ್ಯದರ್ಶಿ ಕೆ.ಬಸವರಾಜು(ವಂದನ), ದಲ್ಲಾಲರ ಸಂಘದ ಅಧ್ಯಕ್ಷ ಕೆ.ಎಂ.ಅರವಿಂದ, ಗ್ರಾಮಾಂತರ ವೀರಶೈವ ಅಧ್ಯಕ್ಷ ಟಿ.ಆರ್.ಕಿರಣ್‌ಶಂಕರ್, ಸಿ.ಎಸ್.ಜಯಪ್ರಕಾಶ್, ಪದ್ಮನಾಗರಾಜು, ಡಾ.ಕೆ.ಎಂ.ಜಯಕುಮಾರ್, ಟಿ.ಪ್ರಭುದೇವ್, ಎಚ್.ವಿ.ನಾಗರಾಜು, ನಗರಸಭಾ ಸದಸ್ಯರಾದ ಎಂ.ಸಾವಿತ್ರಮ್ಮ, ವಿಶುಕುಮಾರ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸುವರು.

### ಯೋಗಾಸನದಲ್ಲಿ ವಿದ್ಯಾರ್ಥಿಗೆ ಪ್ರಶಸ್ತಿ



» ದಾವಣಗೆರೆ

ಪತಂಜಲಿ ಯೋಗ ಕೇಂದ್ರ ಬೆಂಗಳೂರು ಮತ್ತು ಡಿವಿಜಿ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ವೇದಿಕೆ ಬೆಂಗಳೂರು ಇವರುಗಳ ಸಂಯುಕ್ತ ಆಶ್ರಯದಲ್ಲಿ ನಡೆದ ರಾಜ್ಯಮಟ್ಟದ ಯೋಗಾಸನ ಚಾಂಪಿಯನ್ಸ್ 2023ರ ಸ್ಪರ್ಧೆಯಲ್ಲಿ ದಾವಣಗೆರೆಯ ಶ್ರೀ ಹರಿರೇಶ್ವರ ಯೋಗ ಶಿಕ್ಷಣ ಕೇಂದ್ರ ವಿದ್ಯಾರ್ಥಿಗಳು ಭಾಗವಹಿಸಿ ಪ್ರಶಸ್ತಿಯನ್ನು ಪಡೆದಿರುತ್ತಾರೆ.ಎಸ್ ಎಸ್ ಐನ್ ಪಿ ಶಾಲೆಯ ವಿದ್ಯಾರ್ಥಿಯಾದ 11 ರಿಂದ 15 ರ ವಿಭಾಗದ ಬಾಲಕ ವಿಭಾಗದಲ್ಲಿ ಸೌರಭ ಎಂ.ಆರ್ .ನಾಲ್ಕನೇ ಸ್ಥಾನವನ್ನು ಮತ್ತು 40 ರಿಂದ 50 ವರ್ಷದ ಮಹಿಳೆಯರ ವಿಭಾಗದಲ್ಲಿ ದೀಪ ಕೆ.ಎ ಇವರು ನಾಲ್ಕನೇ ಸ್ಥಾನವನ್ನು ಗಳಿಸಿದ್ದಾರೆ. ಹಾಗೂ ಓಜಸ್ ಎಂ ಜೆ., ಅವಿಷ್ಕ, ಶ್ರೇಯ, ಕರ್ಣ ,ನಿರಂತ್, ಸಂಜಯ್, ಕರಣಂ ಇವರು ಕೂಡ ಭಾಗವಹಿಸಿ ಸಮಾಧಾನಕರ ಬಹುಮಾನವನ್ನು ಪಡೆದಿರುತ್ತಾರೆ.

### ನದಿಯಲ್ಲಿ ತೇಲಿ ಬಂದ ಅಪರಿಚಿತ ವ್ಯಕ್ತಿಯ ಶವ

ಶಿವಮೊಗ್ಗ ಜಿಲ್ಲೆಯಲ್ಲಿ ಮುಂದುವರಿದ ಧಾರಾಕಾರ ಮಳೆ ಹಿನ್ನೆಲೆ ವರದಾ ನದಿಯಲ್ಲಿ ಅಪರಿಚಿತ ವ್ಯಕ್ತಿಯ ಶವ ತೇಲಿ ಬಂದಿದೆ. ನದಿಯಲ್ಲಿ ಅಪರಿಚಿತ ಶವ ನೋಡಿ ಗ್ರಾಮಸ್ಥರು ಗಾಬರಿಗೊಂಡಿದ್ದಾರೆ.

# ಕೇಂದ್ರದ ವಿರುದ್ಧ ಅವಿಶ್ವಾಸ ಮಂಡಿಸಿದ ಇಂಡಿಯಾ

» ಮೊದಲ ಪುಟದಿಂದ

ಮಣಿಪುರದ ಬಗ್ಗೆ ಮಾತನಾಡಲು ಪ್ರಧಾನಿಯನ್ನು ಒತ್ತಾಯಿಸುವುದು ಪ್ರತಿಪಕ್ಷಗಳ ಅವಿಶ್ವಾಸ ನಿರ್ಣಯದ ಹಿಂದಿನ ಆಲೋಚನೆಯಾಗಿದೆ.

ಅವಿಶ್ವಾಸ ನಿರ್ಯಣದ ನೋಟೀಸ್ ನೀಡಿದ ಸಂಸದರ ಎಣಿಕೆಯ ನಂತರ ಲೋಕಸಭಾದ್ಯಕ್ಷರು, ನಿಯಮ 198 ರ ಅಡಿಯಲ್ಲಿ ಚರ್ಚೆಗೆ ನೋಟಿಸ್ ಸಲ್ಲಿಸಿದ 10 ದಿನಗಳಲ್ಲಿ ದಿನಾಂಕ ನಿರ್ಧರಿಸಬೇಕಾಗಿದೆ. ಸಭಾಧ್ಯಕ್ಷರು ನಿರ್ಧರಿಸಿದ ದಿನ ಸರ್ಕಾರವು ತನ್ನನ್ನು ತಾನು ಸಮರ್ಥಿಸಿಕೊಳ್ಳಬೇಕಾಗುತ್ತದೆ.

ವಿರೋಧ ಪಕ್ಷಗಳು ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ವಿರುದ್ಧ ಎರಡನೇ ಅವಧಿಗೆ ಮೊದಲ ಅವಿಶ್ವಾಸ ನಿರ್ಣಯ ಮಂಡನೆಯಾಗಿದೆ. 2018ರ ಜುಲೈ 20 ರಂದು ತನ್ನ ಮೊದಲ ಅವಧಿಯಲ್ಲಿ ಆಡಳಿತದಲ್ಲಿ ಅವಿಶ್ವಾಸ ಮಂಡಿಸಿದ್ದರು.

ಆಡಳಿತಾರೂಢ ಬಿಜೆಪಿ ನೇತೃತ್ವದ ಎನ್‌ಡಿಎ ಪರ ಸಂಖ್ಯಾಬಲ ಹೆಚ್ಚಿರುವುದರಿಂದ ಲೋಕಸಭೆಯಲ್ಲಿ ಮೇಲೆ ಅವಿಶ್ವಾಸ ನಿರ್ಣಯ ಸೋಲಿಸಲು ಸಾಧ್ಯವಾಗುವುದಿಲ್ಲ ಎಂದು ವಿರೋಧ ಪಕ್ಷದ ನಾಯಕರಿಗೆ ತಿಳಿದಿದ್ದರೂ, ಅದನ್ನು ತಳ್ಳುವ ಹಿಂದಿನ ಆಲೋಚನೆ ಇದ್ದರೂ ಮಣೀಪುರ ವಿಷಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಹೇಳಿಕೆ ನೀಡುವಂತೆ ಆಗ್ರಹಿಸುವುದು ಅವರ ಉದ್ದೇಶವಾಗಿದೆ.

ಲೋಕಸಭೆಯು ಪ್ರಸ್ತುತ 543 ಸ್ಥಾನಗಳನ್ನು ಹೊಂದಿದ್ದು, ಅದರಲ್ಲಿ ಐದು ಸ್ಥಾನಗಳು ಖಾಲಿ ಇವೆ. ಎನ್‌ಡಿಎ 330 ಕ್ಕೂ ಹೆಚ್ಚು ಸದಸ್ಯರನ್ನು ಹೊಂದಿದೆ, ಇಂಡಿಯಾ ಗುಂಪಿನ ಸದಸ್ಯರು 140 ಕ್ಕೂ ಹೆಚ್ಚು ಸದಸ್ಯರನ್ನು ಹೊಂದಿದ್ದಾರೆ, ಆದರೆ 60 ಕ್ಕೂ ಹೆಚ್ಚು ಸದಸ್ಯರು ಎರಡು ಬಣಗಳಲ್ಲಿ ಯಾವುದೇ ಪಕ್ಷಗಳಲ್ಲಿ ಗುರುತಿಸಿಕೊಂಡಿಲ್ಲ.

ಕಾಂಗ್ರೆಸ್ ಸಂಸದ ಮನೀಶ್ ತಿವಾರಿ ಲೋಕಸಭೆಯಲ್ಲಿ ಮಣಿಪುರದ ಪರಿಸ್ಥಿತಿಯ ಬಗ್ಗೆ ಚರ್ಚಿಸಲು ಒತ್ತಾಯಿಸಿ ನೋಟಿಸ್ ನೀಡಿದ್ದಾರೆ. ಮತ್ತೊಂದೆಡೆ ರಾಜ್ಯಸಭೆಯಲ್ಲಿ ಡಿಎಂಕೆ ಸದಸ್ಯ ತಿರುಚಿ ಶಿವ, ಆ[illegible]ಜೆಡಿ ಸಂಸದ ಮನೋಜ್ ಕುಮಾರ್ ಝಾ, ಕಾಂಗ್ರೆಸ್ ಸದಸ್ಯರಾದ ರಾಜೀವ್ ಶುಕ್ಲಾ ಮತ್ತು ರಂಜೀತ್ ರಂಜನ್ ಮತ್ತು ಎಎಪಿ ಸದಸ್ಯ ರಾಘ ಚಡ್ಡಾ ಅವರು ರಾಜ್ಯಸಭೆಯಲ್ಲಿ ನಿಯಮ 267 ರ ಅಡಿಯಲ್ಲಿ ವ್ಯವಹಾರ ನೋಟಿಸ್ ಅಮಾನತುಗೊಳಿಮಣಿಪುರ ಪರಿಸ್ಥಿತಿಯ ಕುರಿತು ಚರ್ಚೆಗೆ ಒತ್ತಾಯಿಸಿದ್ದಾರೆ.

**ಜನರಿಗೆ ವಿಶ್ವಾಸ: ಜೋಶಿ-** ದೇಶದ"ಜನರಿಗೆ ಪ್ರಧಾನಿ ಮೋದಿ ಮತ್ತು ಬಿಜೆಪಿ ಮೇಲೆ ವಿಶ್ವಾಸವಿದೆ. ಅವರು ಕಳೆದ ಅವಧಿಯಲ್ಲೂ ಅವಿಶ್ವಾಸ ನಿರ್ಣಯವನ್ನು ತಂದರು. ಅವರಿಗೆ ಈ ದೇಶದ ಜನರು ತಕ್ಕ ಪಾಠ ಕಲಿಸಿದ್ದಾರೆ" ಎಂದು ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ, ಹೇಳಿದ್ದಾರೆ.

ಹಿಂದಿನ ಸರ್ಕಾರದಲ್ಲಿ ಅವಿಶ್ವಾಸ ನಿರ್ಣಯ ಮಂಡಿಸಿ, ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಗೆ ಬಹುಮತ ಬರಲು ಕಾರಣರಾಗಿದ್ದಾರೆ. ಈಗಲೂ ಮಂಡಿಸಿದರೆ ಮುಂದಿನ ಬಾರಿ ಬಿಜೆಪಿಯೇ ಅಧಿಕಾರಕ್ಕೆ ಬರಲಿದೆ ಎಂದು ತಿಳಿಸಿದ್ದಾರೆ.

ಕೇಂದ್ರ ಸಂಸದೀಯ ವ್ಯವಹಾರಗಳ ರಾಜ್ಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಮಾತನಾಡಿ ಅವಿಶ್ವಾಸ ಗೊತ್ತುವಳಿ ಬರಲಿ, ಯಾವುದೇ ಪರಿಸ್ಥಿತಿಗೆ ಸರ್ಕಾರ ಸಿದ್ಧವಾಗಿದೆ ಎಂದು ಹೇಳಿದ್ದಾರೆ.

**ಪ್ರಧಾನಿ ಸಂಸತ್ತಿಗೆ ಬರಲು ಸಹಕಾರಿ:** ಅವಿಶ್ವಾಸ ನಿರ್ಣಯ ರಾಜಕೀಯ ಉದ್ದೇಶದೊಂದಿಗೆ ತರುವ ರಾಜಕೀಯ ನಡೆ.ಅವಿಶ್ವಾಸ ನಿರ್ಣಯ ಮಂಡನೆಯಿಂದ ಪ್ರದಾನಿ ಅವರನ್ನು ಅವರನ್ನು ಸಂಸತ್ತಿಗೆ ಬರುವಂತೆ ಒತ್ತಾಯಿಸುತ್ತದೆ ಎಂದು ಸಿಪಿಐ ಸಂಸದ ಬಿನೋಯ್ ವಿಶ್ವಂ ಹೇಳಿದ್ದಾರೆ.

ಸಂಸತ್ತಿನ ಒಳಗೆ ದೇಶದ ಸಮಸ್ಯೆಗಳ ಬಗ್ಗೆ ವಿಶೇಷವಾಗಿ ಮಣಿಪುರದ ಬಗ್ಗೆ ಚರ್ಚೆ ನಡೆಸಲು ಸಹಕಾರಿಯಾಗಲಿದೆ ಎಂದಿದ್ದಾರೆ.

# ಅಪ್ಪ ಮಗನ ಕಾಲದ ಕಾಮಗಾರಿಗಳು ತನಿಖೆಯಾಗಲಿ: ವಿ.ಸೋಮಣ್ಣ ಗುಟುರು

» ಬೆಂಗಳೂರು



ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಗೋವಿಂದ ರಾಜನಗರ ವಿಧಾನಸಭಾ ಕ್ಷೇತ್ರ ಸೇರಿದಂತೆ ಬಿಬಿಎಂಪಿ ವ್ಯಾಪ್ತಿಯ ವಿಧಾನಸಭಾ ಕ್ಷೇತ್ರವಾರು ನಡೆದಿರುವ ಕಾಮಗಾರಿಗಳ ಗುಣಮಟ್ಟ ಪರೀಕ್ಷೆಗೆ ಸೂಚಿಸಿರುವುದು ಸ್ವಾಗತಾರ್ಹ. ಇದರ ಜತೆಗೆ ಕಾಂಗ್ರೆಸ್ ಅವಧಿಯಲ್ಲಿಗೋವಿಂದ ರಾಜನಗರ ಹಾಗೂ ವಿಜಯನಗರ ಕ್ಷೇತ್ರಗಳ ವ್ಯಾಪ್ತಿಯಲ್ಲಿ ನಡೆದ ಕಾಮಗಾರಿಗಳ ಬಗ್ಗೆಯೂ ತನಿಖೆಯಾಗಲಿ ಎಂದು ಮಾಜಿ ಸಚಿವ ವಿ.ಸೋಮಣ್ಣ ಒತ್ತಾಯಿಸಿದ್ದಾರೆ.

ಮಾಧ್ಯಮದ ಜೊತೆ ಮಾತನಾಡಿದ ಸೋಮಣ್ಣ, ಗೋವಿಂದರಾಜನಗರ ಕ್ಷೇತ್ರದ ಕಾಂಗ್ರೆಸ್ ಶಾಸಕ ಪ್ರಿಯಕೃಷ್ಣ ಅವರು ಕಳೆದ ಐದು ವರ್ಷದಲ್ಲಿ ಕ್ಷೇತ್ರದ ವ್ಯಾಪ್ತಿಯಲ್ಲಿ ನಡೆದಿರುವ ಕಾಮಗಾರಿಗಳ ಗುಣಮಟ್ಟದ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಕಾಮಗಾರಿಗಳ ಪರೀಕ್ಷೆಗೆ ಒತ್ತಾಯಿಸಿ ಬಿಬಿಎಂಪಿ ಮುಖ್ಯ ಆಯುಕ್ತರಿಗೆ ಪತ್ರ ಬರೆದಿದ್ದಾರೆ. ಇದು ಸ್ವಾಗತಾರ್ಹ ಎಂದಿದ್ದಾರೆ.

ಮುಂದುವರೆದು, ಈ ಹಿಂದೆ ಇದೇ ಪ್ರಿಯಕೃಷ್ಣ ಗೋವಿಂದರಾಜನಗರ ಕ್ಷೇತ್ರದಲ್ಲಿ 9 ವರ್ಷ ಶಾಸಕರಾಗಿದ್ದರು. ಪಕ್ಕದ ವಿಜಯನಗರ ಕ್ಷೇತ್ರದಲ್ಲಿ ಅವರ ತಂದೆ ಎಂ.ಕೃಷ್ಣಪ್ಪ 15 ವರ್ಷಗಳಿಂದ ಶಾಸಕರಾಗಿದ್ದಾರೆ. ಹೀಗಾಗಿ ಇವರ ಅವಧಿಯಲ್ಲಿ ನಡೆದಿರುವ ಕಾಮಗಾರಿಗಳ ಗುಣಮಟ್ಟದ ಬಗ್ಗೆಯೂ ತನಿಖೆ ನಡೆಸಬೇಕು. ಕಾಮಗಾರಿಗಳಲ್ಲಿ ಲೋಪಗಳು ಕಂಡು ಬಂದಲ್ಲಿ ತಪ್ಪಿತಸ್ಥರನ್ನು ಶಿಕ್ಷೆಗೆ ಗುರಿಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ನಾನು ಕಳೆದ ಐದು ವರ್ಷದಲ್ಲಿ ಗೋವಿಂದರಾಜನಗರ ಕ್ಷೇತ್ರದಲ್ಲಿ ಮಾಡಿರುವ ಕೆಲಸದಲ್ಲಿ ಶೇ.10ರಷ್ಟುಕೆಲಸವನ್ನು ಶಾಸಕ ಪ್ರಿಯಕೃಷ್ಣಮುಂದಿನ ಐದು ವರ್ಷ ಮಾಡಿ ತೋರಿಸಲಿ. ಆಗ ನಾನೇ ಅವರನ್ನು ಅಭಿನಂದಿಸುತ್ತೇನೆ. ನಾನು ಕಳೆದ ಐದು ವರ್ಷದಲ್ಲಿ ಕಣ್ಣಿಗೆ ಕಾಣುವಂತಾ ಕೆಲಸಗಳನ್ನು ಮಾಡಿದ್ದೇನೆ. ಲೋಪಗಳಿದ್ದಲ್ಲಿ ಯಾವುದೇ ತನಿಖೆ ಮಾಡಲಿ. ಜತೆಗೆ ಹಿಂದೆ 'ಅಪ್ಪ-ಮಗ'ನ ಅವಧಿಯ ಕೆಲಸಗಳ ಬಗ್ಗೆಯೂ ತನಿಖೆಯಾಗಬೇಕು. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪಾರದರ್ಶಕವಾಗಿ ಕೆಲಸ ಮಾಡುತ್ತಿದ್ದಾರೆ. ಇವೆಲ್ಲವನ್ನೂ ಕೈಗೆತ್ತಿಕೊಂಡು ತಾರ್ಕಿಕ ಅಂತ್ಯ ಕಾಣಿಸಲಿ ಎಂದರು.

# ಗ್ರಾಮ ಪಂಚಾಯತಿಗಳಲ್ಲಿ ಜನನ ಮರಣ ಪ್ರಮಾಣ ಪತ್ರ ವಿತರಣೆಗೆ ಸಿದ್ಧತೆ

**ಬೆಂಗಳೂರು:** ಜನನ ಮರಣ ಪ್ರಮಾಣ ಪತ್ರಕ್ಕೆ ಅಲೆಯುವುದು, ಕಾಯವುದಕ್ಕೆ ಇನ್ನುಂದೆ ಕಡಿವಾಣ ಬೀಳಲಿದೆ. ಗ್ರಾಮಪಂಚಾಯಿತಿಯಲ್ಲೇ ಜನನ ಮತ್ತು ಮರಣ ಪ್ರಮಾಣ ಪತ್ರ ಪಡೆಯುವ ವ್ಯವಸ್ಥೆ ಜಾರಿಗೆ ಬರಲಿದೆ.ಹೌದು, ರಾಜ್ಯ ಸರ್ಕಾರವು ಇನ್ಮುಂದೆ ಗ್ರಾಮೀಣ ಜನರು ಕಚೇರಿಗಳನ್ನು ಅಲೆಯುವುದನ್ನು ತಪ್ಪಿಸಲು ಗ್ರಾಮಪಂಚಾಯಿತಿಗಳಲ್ಲೇ ಜನನ-ಮರಣ ಪ್ರಮಾಣ ಪತ್ರಗಳನ್ನು ನೀಡಲು ಈಗಾಗಲೇ ಸಿದ್ಧತೆ ಮಾಡಿಕೊಂಡಿದೆ.ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನು (ಪಿಡಿಓ) ಸಬ್ ರಿಜಿಸ್ಟರ್ ಗಳಾಗಿ ನೇಮಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದ್ದು, ಅವರು ಘಟನೆ ನಡೆದ 30 ದಿನಗಳಲ್ಲಿ ಜನನ ಮತ್ತು ಮರಣವನ್ನು ನೋಂದಾಯಿಸಬಹುದು. ಜನನ ನೋಂದಣಿಗಾಗಿ ಗ್ರಾಮ ಲೆಕ್ಕಿಗರನ್ನು ಸಬ್ ರಿಜಿಸ್ಟ್ರಾರ್ ಗಳಾಗಿ ನೇಮಿಸಲಾಗಿದೆ. ಅವರು ಗ್ರಾಮ ಪಂಚಾಯತಿಯಲ್ಲೇ ಜನನ- ಮರಣ ಪ್ರಮಾಣಪತ್ರಗಳನ್ನು ನೀಡಲಿದ್ದಾರೆ ಎನ್ನಲಾಗಿದೆ.ರಾಜ್ಯ ಸರ್ಕಾರ ಈಗಾಗಲೇ ಪಂಚತಂತ್ರ 2.0 ತಂತ್ರಾಂಶದ ಪ್ರಾಯೋಗಿಕ ಚಾಲನೆಯನ್ನು ಪ್ರಾರಂಭಿಸಿದೆ ಮತ್ತು ಇದನ್ನು ಶೀಘ್ರದಲ್ಲೇ ಪ್ರಾಯೋಗಿಕ ಆಧಾರದ ಮೇಲೆ ಎರಡು ಆಯ್ದ ಜಿಲ್ಲೆಗಳಲ್ಲಿ ಪರಿಚಯಿಸಲಾಗುವುದು. ಪಂಚತಂತ್ರ 2.0 ಹೊಸ ಸಾಫ್ಟ್‌ವೇರ್ ಪ್ಲಾಟ್‌ಫಾರ್ಮ್ ಆಗಿದ್ದು, ಇದು ಗ್ರಾಮ ಪಂಚಾಯಿತಿಗಳ ಎಲ್ಲಾ ಪ್ರಮುಖ ಕಾರ್ಯಗಳು ಮತ್ತು ಕಾರ್ಯಾಚರಣೆಗಳನ್ನು ಬಲಪಡಿಸಲು, ಡಿಜಿಟಲೀಕರಣಗೊಳಿಸಲು ಸಹಾಯವಾಗುತ್ತದೆ.ಸರ್ಕಾರ ಜನನ-ಮರಣದ ಮಾಹಿತಿ ಪಡೆದು ಹೊಸ-ಹೊಸ ಯೋಜನೆಗಳ ನೀಡಲು ಸಹಾಯವಾಗಲಿದೆ. ಅಲ್ಲದೇ ಲಿಂಗಾನುಪಾತ, ಮರಣದ ಮಾಹಿತಿಯೂ ಸಿಗಲಿದೆ. ಒಟ್ಟಾರೆ ಕೆಲಸದ ಭಾರ ಕಡಿಮೆ, ಅಕ್ರಮ ಸರ್ಟಿಫಿಕೇಟ್‌ಗೆ ಡಿಜಿಟಲ್ ವ್ಯವಸ್ಥೆಗೆ ಬ್ರೇಕ್ ಬೀಳಲಿದೆ.

## ಪ್ರಮುಖ ಸುದ್ದಿ

# ಫಸಲ್ ಬಿಮಾ ಯೋಜನೆ: ಪ್ರಚಾರ ವಾಹನಕ್ಕೆ ಚಾಲನೆ

» ಚಿತ್ರದುರ್ಗ

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆ-ಮುಂಗಾರು 2023ರ ಪ್ರಚಾರ ವಾಹನಕ್ಕೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಚಾಲನೆ ನೀಡಿದರು.

ನಗರದ ಪ್ರವಾಸಿ ಮಂದಿರದ ಆವರಣದಲ್ಲಿ ಮಂಗಳವಾರ ಫಸಲ್ ವಿಮಾ ಯೋಜನೆ ಪ್ರಚಾರ ವಾಹನಕ್ಕೆ ಹಸಿರು ನಿಶಾನೆ ತೋರಿದ ಅವರು, ಮುಂಗಾರು ಹಂಗಾಮಿನ ಫಸಲ್ ವಿಮಾ ಯೋಜನೆಯಡಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸಿಕೊಳ್ಳುವಂತೆ ಕರೆ ನೀಡಿದರು.

ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಗೆ ಸಂಬಂಧಿಸಿದಂತೆ ಸಮಸ್ಯೆಗಳ ಕುರಿತು ರೈತ ಮುಖಂಡರು ಈ ಸಂದರ್ಭದಲ್ಲಿ ಶಾಸಕರ ಗಮನಕ್ಕೆ ತಂದರು. ಈ ಯೋಜನೆ ಕುರಿತು ಕೃಷಿ ಇಲಾಖೆ ಅಧಿಕಾರಿಗಳು, ವಿಮಾ ಪ್ರತಿನಿಧಿಗಳು ಹಾಗೂ ರೈತ ಮುಖಂಡರ ಸಭೆ ಕರೆದು, ಮಾಹಿತಿ ಪಡೆಯಲಾಗುವುದು. ನಂತರ ಫಸಲ್ ಬಿಮಾ ಯೋಜನೆಯ ಸಮಸ್ಯೆಗಳ ಕುರಿತು ವಿಧಾನಸಭಾ ಕಲಾಪದಲ್ಲಿ ಚರ್ಚಿಸುತ್ತೇನೆ ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ರೈತ ಮುಖಂಡರಿಗೆ ಭರವಸೆ ನೀಡಿದರು.

ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಎನ್.ಚಂದ್ರಕುಮಾರ್ ಮಾತನಾಡಿ,ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು ಅಗ್ರಿಕಲ್ಚರಲ್ ಇನ್‌ಶೂರೆನ್ಸ್ ಕಂಪನಿ ಆಫ್ ಇಂಡಿಯಾ ಲಿಮಿಟೆಡ್ ಸಂಸ್ಥೆಯ ವತಿಯಿಂದ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸುತ್ತಿದೆ. ಪ್ರತಿಯೊಬ್ಬರು ಬೆಳೆಗಳಿಗೆ ವಿಮೆ ಮಾಡಿಸಿದರೆ ಅತಿವೃಷ್ಟಿ, ಅನಾವೃಷ್ಠಿಯಿಂದ ಸಮಸ್ಯೆಯಾದರೆ ಪರಿಹಾರ ಪಡೆಯಬಹುದು. ಸ್ಥಳೀಯ ವಿಕೋಪಗಳನ್ನೂ ಆಧರಿಸಿ ರೈತರು ವಿಮಾ ಯೋಜನೆಯಡಿ ನಷ್ಟ ಪರಿಹಾರವನ್ನು ಪಡೆದುಕೊಳ್ಳಬಹುದು. ಇದಕ್ಕಾಗಿ ವಿಕೋಪಕ್ಕೆ ತುತ್ತಾದ ಬೆಳೆಗಳ ಮಾಹಿತಿಯನ್ನು ವಿಮಾ ಕಂಪನಿ ಪ್ರತಿನಿಧಿಗೆ 72 ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬೇಕು ಎಂದರು.

ಕಳೆದ ವರ್ಷ ಮುಂಗಾರು ಹಂಗಾಮಿನಲ್ಲಿ ಚಿತ್ರದುರ್ಗ ತಾಲ್ಲೂಕಿನಲ್ಲಿ 5408 ರೈತರಿಗೆ ಒಟ್ಟು ರೂ.10.69 ಕೋಟಿ ಮತ್ತು ಹಿಂಗಾರು ಹಂಗಾಮಿನಲ್ಲಿ 1285 ರೈತರಿಗೆ ಒಟ್ಟು 1.50 ಕೋಟಿ ಬೆಳೆ ಪರಿಹಾರದ ಮೊತ್ತ ರೈತರ ಖಾತೆಗೆ ಜಮೆಯಾಗಿದೆ. ಫಸಲ್ ಬಿಮಾ ಯೋಜನೆ ನೋಂದಣಿಗೆ ಇದೇ ಜುಲೈ 31 ಕೊನೆಯ ದಿನವಾಗಿದ್ದು, ಇದರ ಬಗ್ಗೆ ಹೆಚ್ಚಿನ ಮಾಹಿತಿ ಆಯಾ ರೈತ ಸಂಪರ್ಕಗಳಲ್ಲಿ ರೈತರು ಪಡೆಯಬಹುದು ಎಂದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಕಾರ್ತೀಕ್, ರೈತ ಮುಖಂಡರಾದ ಬಸ್ತಿಹಳ್ಳಿ ಸುರೇಶ್ ಬಾಬು, ಧನಂಜಯ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ನರಸಿಂಹಮೂರ್ತಿ, ಮೆದೇಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ವಿಜಯ್ ಕುಮಾರ್ ಸೇರಿದಂತೆ ಮತ್ತಿತರರು ಇದ್ದರು.



ಚಿತ್ರದುರ್ಗ ನಗರದ ಪ್ರವಾಸಿ ಮಂದಿರದ ಆವರಣದಲ್ಲಿ ಮಂಗಳವಾರ ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆ ಪ್ರಚಾರ ವಾಹನಕ್ಕೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

## ಫಾಸ್ಟ್ ನ್ಯೂಸ್

### ಖಾಸಗಿ ಅನುದಾನ ರಹಿತ ಶಾಲಾ ಶಿಕ್ಷಕರಿಗೆ ಸಿಆರ್‌ಪಿಯಿಂದ ಅವಮಾನ ಆರೋಪ

» **ಚಳ್ಳಕೆರೆ**

ತಾಲ್ಲೂಕಿನ ಅನುದಾನ ರಹಿತ ಶಾಲಾ ಶಿಕ್ಷಕರೊಬ್ಬರಿಗೆ ಸಿಆರ್‌ಪಿಯವರು ಏಕವಚನದಲ್ಲಿ ನಿಂದಿಸಿದ್ದಾರೆಂದು ಆರೋಪಿಸಿ ಖಾಸಗಿ ಅನುದಾನ ರಹಿತ ಶಿಕ್ಷಕರ ಒಕ್ಕೂಟದ ರಾಜ್ಯ ಪ್ರಧಾನ ಕಾರ್ಯದರ್ಶಿ ದೊಡ್ಡ ಉಳ್ಳಾರ್ತಿ ಗೌರೀಶ್ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ನೀಡಿದ್ದಾರೆ.

ಮನವಿಯಲ್ಲಿ ಇತ್ತೀಚೆಗಷ್ಟೇ ಶಾಲೆಗೆ ಆಗಮಿಸಿದ ಸಿಆರ್‌ಪಿ ದಾದಾಪೀರ್ ಶಿಕ್ಷಕನಾದ ನನ್ನನ್ನು ಏಕವಚನದಲ್ಲಿ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಈ ಬಗ್ಗೆ ಸಿಆರ್‌ಪಿಯವರಿಗೆ ಮನವಿ ಮಾಡಿಕೊಂಡರೂ ನಿರಾಕರಿಸಿ ಮನಬಂದಂತೆ ಮಾತನಾಡಿದ್ದಾರೆ. ಇದರಿಂದ ನನ್ನಗೌರವಕ್ಕೆ ದಕ್ಕೆಯಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಕ್ಷೇತ್ರ ಶಿಕ್ಷಣಾಧಿಕಾರಿಗಳ ಪರವಾಗಿ ಮನವಿ ಸ್ವೀಕರಿಸಿದ ಕಚೇರಿ ಅಧೀಕ್ಷಕ ಎನ್.ಎಸ್.ಪುರುಷೋತ್ತಮ್ ತಮ್ಮ ಮನವಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನೀಡಿ ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ಅನುದಾನ ರಹಿತ ಖಾಸಗಿ ಶಾಲೆಗಳ ಶಿಕ್ಷಕರಾದ ಕೆ.ತಿಪ್ಪೇಸ್ವಾಮಿ, ಜಿ.ಚಿದಾನಂದ, ರಮೇಶ್, ಎಸ್.ಮಂಜುಳಾ, ಪಿ.ರತ್ನ, ಎಸ್.ಗಾಯಿತ್ರಿ, ಟಿ.ಆಶಾಕುಮಾರಿ, ಜಿ.ಎಚ್.ಶೋಭಾ ಮುಂತಾದವರು ಉಪಸ್ಥಿತರಿದ್ದರು.

### ಮದಕರಿ ನಗರ ಸರ್ಕಾರಿ ಶಾಲೆಯ ಗೇಟ್ ದುರಸ್ಥಿಯಲ್ಲಿ ವಿಳಂಬ: ಕಿಡಿಗೇಡಿಗಳ ತಾಣವಾದ ಶಾಲಾ ಆವರಣ.



» **ಚಳ್ಳಕೆರೆ**

ಮದಕರಿನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಗೇಟ್ ಮುರಿದು ಹೋಗಿದ್ದು, ರಿಪೇರಿಯಾದ ಹಿನ್ನೆಲೆಯಲ್ಲಿ ಪ್ರತಿನಿತ್ಯ ಕಿರಿಗೇಡಿಗಳು ಶಾಲೆ ಒಳಗೆ ಪ್ರವೇಶಿಸಿ ಮದ್ಯ ಸೇವಿಸಿದ ಬಾಟಲ್, ಗುಟ್ಕಾ ಚೀಟಿಗಳನ್ನು ಎಲ್ಲಂದರಲ್ಲಿ ಬಿಸಾಕಿ ಶಾಲೆಯ ವಾತಾವಣವನ್ನು ಆಳು ಮಾಡಿದ್ದಾರೆ. ಶಾಲೆಗೆ ಗೇಟ್ ಅಳವಡಿಸಿ ಅಲ್ಲಿನ ವಿದ್ಯಾರ್ಥಿಗಳಿಗೆ ಉತ್ತಮ ವಾತಾವಣದಲ್ಲಿ ಕಲಿಯುವ ಆಸಕ್ತಿ ಉಂಟು ಮಾಡಲು ಕೂಡಲೇ ಗೇಟ್ ಅಳವಡಿಸಿ ವಿದ್ಯಾರ್ಥಿಗಳಿಗೆ ಉತ್ತಮ ವ್ಯವಸ್ಥೆ ಕಲ್ಪಿಸಬೇಕೆಂದು ಆಮ್ ಆದ್ಮಿ ಪಕ್ಷದ ತಾಲ್ಲೂಕು ಅಧ್ಯಕ್ಷ ಬಿ.ಪಾಪಣ್ಣ, ಓಬಳೇಶ್ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

### ಮೂಲ ನಿವಾಸಿ ಮಾಜಿ ಸೈನಿಕರ ಮಕ್ಕಳಿಗೆ ನಗದು ಪ್ರಶಸ್ತಿಗಾಗಿ ಅರ್ಜಿ

» **ಚಿತ್ರದುರ್ಗ**

ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಸಾರ್ವತ್ರಿಕ ಪರೀಕ್ಷೆಗಳಲ್ಲಿ ಗರಿಷ್ಟ ಅಂಕ ಪಡೆದ ಕರ್ನಾಟಕದ ಮೂಲ ನಿವಾಸಿ ಮಾಜಿ ಸೈನಿಕರ ಮಕ್ಕಳಿಗೆ "ಜನರಲ್ ಕೆ.ಎಸ್.ತಿಮ್ಮಯ್ಯ" ನಗದು ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಶುಲ್ಕ ರಹಿತ ಅರ್ಜಿಗಳನ್ನು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಚೇರಿಯಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಅಕ್ಟೋಬರ್ 30 ರೊಳಗಾಗಿ ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಚೇರಿಗೆ ಸಲ್ಲಿಸಬೇಕು. ಮಾಹಿತಿಗಾಗಿ ಶಿವಮೊಗ್ಗ ಕಚೇರಿ ದೂರವಾಣಿ ಸಂಖ್ಯೆ 08182-220925 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕ ಡಾ.ಹಿರೇಮಠ ತಿಳಿಸಿದ್ದಾರೆ.

### ಕಲ್ಯಾಣ ಹುದ್ದೆಗೆ ಅರ್ಜಿ

» **ಚಿತ್ರದುರ್ಗ**

ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ 14 ಕಲ್ಯಾಣ ಸಂಘಟಿಕರು 'ಸಿ' ವೃಂದದ ಹುದ್ದೆಗಳ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಹತೆಯುಳ್ಳ ಭೂಸೇನೆಯ ಜೆ.ಸಿ.ಓ ರ್‍ಯಾಂಕ್ ಹಾಗೂ ವಾಯುಪಡೆ ಮತ್ತು ನೌಕಾಪಡೆಯ ತತ್ಸಮಾನವಾದ ರ್‍ಯಾಂಕ್‌ನಿಂದ ಸೇವಾ ನಿವೃತ್ತಿ ಹೊಂದಿರುವ ಮಾಜಿ ಸೈನಿಕರು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಣೆಯಾದ ದಿನಾಂಕದಿಂದ 20 ದಿನದೊಳಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಈ ಕುರಿತಂತೆ ಅಧಿಸೂಚನೆ ಸಂಖ್ಯೆ ಸೈಕಪುಇ/ಸಿಬ್ಬಂದಿ/134/ಗ್ರೂಪ್ ಸಿ/2023 ದಿನಾಂಕ 13 ಜುಲೈ 2023 ಹಾಗೂ ಕರ್ನಾಟಕ ರಾಜ್ಯ ಪತ್ರ ದಿನಾಂಕ 18 ಜುಲೈ 2023ರ ಸಂಚಿಕೆ-140ರ ಭಾಗ-5ರಲ್ಲಿ ಪ್ರಕಟಿಸಲಾದ ಪ್ರಕಟಣೆಯನ್ನು ಅನುಸರಿಸಲು ಕೋರಿದೆ.

## ಆರೋಗ್ಯಕರ ಸಮಾಜ ನಿರ್ಮಾತೃ ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನ

# ಆಗಸ್ಟ್ 1 ವ್ಯಸನ ಮುಕ್ತ ದಿನಾಚರಣೆ

» **ವಿಶೇಷ ಲೇಖನ**

ದುರ್ವ್ಯಸನಗಳು ಹಾಗೂ ದುಶ್ಚಟಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಿ, ಮನಪರಿವರ್ತಿಸಿ, ಜನರಲ್ಲಿನ ದುಶ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಸಂಗ್ರಹಿಸಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸಿದವರು ಡಾ॥ ಮಹಾಂತ ಶಿವಯೋಗಿಗಳು.

ಬಾಗಲಕೋಟೆಯ ಜಮಖಂಡಿ ತಾಲೂಕಿನ ಹಿಪ್ಪರಗಿ ಗ್ರಾಮದಲ್ಲಿ ಆಗಸ್ಟ್ 1, 1930 ರಲ್ಲಿ ಜನಿಸಿದ ಡಾ॥ ಮಹಾಂತ ಶಿವಯೋಗಿಗಳು ತಮ್ಮ 10ನೇ ವಯಸ್ಸಿಗೆ ಸವದಿಯ ವಿರಕ್ತಮಠದ ಕಿರಿಯ ಸ್ವಾಮೀಜಿಗಳಾದರು.

ಕಾಶಿಯಲ್ಲಿ ಸಂಸ್ಕೃತ, ಹಿಂದಿ, ಯೋಗ, ಶಾಸ್ತ್ರಿಯ ಸಂಗೀತದಲ್ಲಿ ವಿಶೇಷ ಪರಿಣಿತಿ ಸಾಧಿಸಿದರು. ಉತ್ತರ ಕರ್ನಾಟಕದಲ್ಲಿ ಭೀಕರ ಬರಗಾಲ ಬಂದ ಕಾರಣ ಕಾಶಿಯಿಂದ ಆಗಮಿಸಿ, ನೂರಾರು ಗ್ರಾಮಗಳಲ್ಲಿ ಗಂಜಿ ಕೇಂದ್ರ ಆರಂಭಿಸಿ ದಾಸೋಹ ಮಾಡಿದ್ದು ಮಾತ್ರವಲ್ಲದೇ ಗೋಶಾಲೆಗಳನ್ನು ಆರಂಬಿಸಿ ಮೇವು ಮತ್ತು ನೀರಿನ ವ್ಯವಸ್ಥೆ ಮಾಡಿದರು.

1970 ರಲ್ಲಿ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ 19ನೇ ಪೀಠಾಧಿಕಾರಿಯಾಗಿ ನಂತರ 2018 ರ ವರೆಗೆ ಅಖಂಡ 48 ವರ್ಷಗಳ ಕಾಲ ಅವರ ಸಾಧನೆ ಅಪಾರವಾದುದು.

ನಿರಂತರ ಅನ್ನ ದಾಸೋಹ, ವಚನ ಮಾಂಗಲ್ಯ, ದೇವದಾಸಿ ವಿಮೋಚನಾ ಸಂಸ್ಥೆ,ದೇವದಾಸಿಯರ ಮಕ್ಕಳಿಗೆ ಟ್ರಸ್ಟ್ ಸ್ಥಾಪನೆ,ನಿರುದ್ಯೋಗಿಗಳಿಗೆ ಮತ್ತು ವಿಧವೆಯರಿಗೆ ಕಾಯಕ ಸಂಜೀವಿನಿ ಸಂಸ್ಥೆ ಸ್ಥಾಪನೆ,ನಿಸರ್ಗ ಚಿಕಿತ್ಸೆ-ಯೋಗ ಕೇಂದ್ರ ಸ್ಥಾಪನೆ,ಶಾಖಾ ಮಠಗಳಿಗೆ ಪ.ಜಾತಿ ಮತ್ತು ಪಂಗಡಗಳ ಯುವಕರಿಗೆ ಧರ್ಮ ಸಂಸ್ಕಾರ ನೀಡಿ ಪಟ್ಟಾಭಿಷೇಕ ಮಾಡಿದ್ದು, ಮಹಿಳಾ ಸಾಧಕಿಯರಿಗೆ ಜಂಗಮ ದೀಕ್ಷೆ ನೀಡಿ ಮಠಾಧಿಕಾರಿಯನ್ನಾಗಿ ಮಾಡಿದ್ದು, ಮಠದ ನೂರಾರು ಎಕರೆ ಭೂಮಿಯನ್ನು ಆಯಾ ಗ್ರಾಮಗಳ ರೈತರಿಗೆ ಕೃಷಿ ಮಾಡಿ ಬದುಕಲು ನೀಡಿದ್ದು ಮುಂತಾದ ಹಲವು ಸಮಾಜಮುಖಿ ಕಾರ್ಯಗಳನ್ನು ಮಾಡಿದರು.



ಪ್ರಮುಖವಾಗಿ ಸ್ವಾಮೀಜಿಯವರು ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ 1975 ರಿಂದ ಕೈಗೊಂಡ ಮಹಾಂತ ಜೋಳಿಗೆ ಕಾರ್ಯಕ್ರಮ ಅತ್ಯಂತ ವಿಶಿಷ್ಟವಾದುದು, ಕುಡಿತದ ಚಟದಿಂದ ಪ.ಜಾತಿಯ ಯುವಕನೊಬ್ಬ ನಿಧನದ ಸುದ್ದಿ ಕೇಳಿ ಅವನ ಕೇರಿಗೆ ಸಾಂತ್ವನ ಹೇಳಲು ತೆರಳಿದ್ದ ಸ್ವಾಮಿಗಳಿಗೆ ಆತನ ಪತ್ನಿ ಮತ್ತು ಮಕ್ಕಳು ಉಪವಾಸದಿಂದ ದು:ಖಿಸುವುದನ್ನು ಕಂಡರು. ಇಂತಹ ಸಾವಿರಾರು ಕುಟುಂಬಗಳ ಕುಡಿತ ಮತ್ತು ಇತರೇ ದುಶ್ಚಟಗಳಿಂದ ಹಾಳಾಗಿರುವುದನ್ನು ಅರಿತು, ಇಂತಹ ದುಶ್ಚಟಗಳಿಗೆ ಒಳಗಾಗಿರುವವನ್ನು ಮುಕ್ತಿಗೊಳಿಸುವ ಉದ್ದೇಶದಿಂದ ಮಹಾಂತ ಜೋಳಿಗೆ ಯೋಜನೆ ಆರಂಭಿಸಿದರು.

ಬಟ್ಟೆಯ ಚೀಲದ ಜೋಳಿಗೆ ಹಿಡಿದು , ಕುಡಿತದ ಚಟದಿಂದ ನಿಧನನಾದ ಪ.ಜಾತಿಯ ಯುವಕನ ಕೇರಿಗೆ ಮೊದಲಿಗೆ ತೆರಳಿದ ಸ್ವಾಮೀಜಿಗಳು, ಅಲ್ಲಿನ ಗುಡಿಸಲು ಮನೆಗಳಿಗೆ ತೆರಳಿ ಮದ್ಯಪಾನ, ತಂಬಾಕು ಸೇರಿದಂತೆ ಎಲ್ಲಾ ರೀತಿಯ ದುಶ್ಚಟಗಳ ಬಗ್ಗೆ ಅಲ್ಲಿನ ಜನತೆಗೆ ಮನ ಮುಟ್ಟುವಂತೆ ತಿಳುವಳಿಕೆ ನೀಡಿ ಮನಪರಿವರ್ತನೆ ಮಾಡಿದರು.

ದುರ್ವಸನಿಗಳು ತಮ್ಮ ಎಲ್ಲಾ ದುಶ್ಚಟಗಳ ವಸ್ತುಗಳನ್ನು ಸ್ವಾಮೀಜಿ ಅವರ ಜೋಳಿಗೆಗೆ ಹಾಕಿ, ಇನ್ನೆಂದೂ ಅವುಗಳನ್ನು ಬಳಸುವುದಿಲ್ಲ ಎಂದು ಪ್ರಮಾಣ ಮಾಡಿದರು.

ಜಾತಿ-ಮತ-ಪಂಗಡ-ಧರ್ಮ-ಭಾಷೆ-ದೇಶವೆನ್ನದೇ ಇಡೀ 42 ವರ್ಷಗಳ ಕಾಲ ದೇಶದಲ್ಲಿ ಮಾತ್ರವಲ್ಲದೇ ಇಂಗ್ಲೆಂಡ್ ಸೇರಿದಂತೆ ವಿದೇಶದಲ್ಲೂ ತಮ್ಮ ಮಹಾಂತ ಜೋಳಿಗೆ ಹಿಡಿದು ಜನರಲ್ಲಿನ ದುಶ್ಚಟಗಳ ಭಿಕ್ಷೆ ಬೇಡಿದರು.

ಮಹಾಂತ ಶಿವಯೋಗಿಗಳು ವ್ಯಸನ ಮುಕ್ತ ವ್ಯಕ್ತಿ- ಕುಟುಂಬ-ಸಮಾಜ-ಗ್ರಾಮಗಳ ನಿರ್ಮಾಣ ಮಾಡುವ ಜೊತೆಗೆ ತಮ್ಮ ಜೋಳಿಗೆ ಕಾರ್ಯಕ್ರಮದಲ್ಲಿ ನಾಡಿನ ಪ್ರಖ್ಯಾತ ವೈದ್ಯರು, ಸಮಾಜ ವಿಜ್ಞಾನಿಗಳು,ಸಾಹಿತಿಗಳು, ಸಮಾಜ ಕಳಕಳಿಯ ಕವಿಗಳು, ಧರ್ಮ ಗುರುಗಳನ್ನು ಆಹ್ವಾನಿಸಿ ಅವರಿಂದ ಉಪನ್ಯಾಸಗಳನ್ನು ಮಾಡಿಸುವ ಮೂಲಕ ವ್ಯಸನಗಳ ಮನಪರಿವರ್ತನೆ ಮಾಡುವುದುರ ಜೊತೆಗೆ ಮಕ್ಕಳು,ವಿದ್ಯಾರ್ಥಿಗಳು-ಯುವಜನಾಂಗ ಇಂತಹ ಚಟಗಳಿಗೆ ಬಲಿಯಾದಂತೆ ಅರಿವು ಮೂಡಿಸುತ್ತಿದ್ದರು. ಇದರಿಂದಾಗಿ ಲಕ್ಷಾಂತರ ಜನ ವ್ಯಸನಗಳಿಂದ ಮುಕ್ತರಾಗಿ ಅವರ ಕುಟುಂಬಗಳು ನೆಮ್ಮದಿಯ ಜೀವನ ಸಾಗಿಸುತ್ತಿವೆ.

ಡಾ.ಮಹಾಂತ ಶಿವಯೋಗಿ ಅವರ ಜನ್ಮದಿನವಾದ ಆಗಸ್ಟ್ 1 ನ್ನು ರಾಜ್ಯ ಸರ್ಕಾರವು ರಾಜ್ಯಾದ್ಯಂತ ವ್ಯಸನ ಮುಕ್ತ ದಿನವನ್ನಾಗಿ ಆಚರಿಸಲು ನಿರ್ಧರಿಸಿ ಆದೇಶಿಸಿದ್ದು, ಕರ್ನಾಟಕ ರಾಜ್ಯವನ್ನು ವ್ಯಸನ ಮುಕ್ತ ರಾಜ್ಯವಾಗಿ ಮಾಡಲು ಸಾರ್ವಜನಿಕರು ಹಾಗೂ ಯುವಜನತೆ ವ್ಯಸನಗಳಿಂದ ಮುಕ್ತವಾಗಲು ಈ ದಿನಾಚರಣೆಯು ಪ್ರೇರಣೆಯಾಗಲಿದೆ.

ಆಗಸ್ಟ್ 1 ರಂದು ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಎಲ್ಲಾ ಇಲಾಖೆಗಳು ಸಮನ್ವಯದೊಂದಿಗೆ ಶಾಲಾ ಕಾಲೇಜು ವಿದ್ಯಾರ್ಥಿಗಳು ಸಾರ್ವಜನಿಕರನ್ನು ಒಗ್ಗೂಡಿಸಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಕೈ ಜೋಡಿಸುವ ವಚನ ಪ್ರಮಾಣ ಹಾಗೂ ಜಯಂತಿ ಕಾರ್ಯಕ್ರಮ ಜಾಥಾ ಆಯೋಜಿಸಿ ಶ್ರೀಗಳ ಜಯಂತಿ ಆಚರಿಸಲಾಗುತ್ತಿದೆ.

ವಿಶೇಷ ಲೇಖನ:
» **ಎಸ್. ಶಂಕರಪ್ಪ, ಕಾರ್ಯದರ್ಶಿ, ಕರ್ನಾಟಕ ಮದ್ಯಪಾನ ಸಂಯಮ ಮಂಡಳಿ, ಬೆಂಗಳೂರು.**



ಚಿತ್ರದುರ್ಗ ಸೌರಶಕ್ತಿ ಆಧಾರಿತ ಸ್ಮಾರ್ಟ್ ಕ್ಲಾಸ್ ಅಳವಡಿಸಿ ಜಿಲ್ಲೆಗೆ ಮಾದರಿಯಾದ ಕುರುಬರಹಟ್ಟಿ ಸರಕಾರಿ ಪ್ರಾಥಮಿಕ ಶಾಲೆಗೆ ಜಿಲ್ಲಾಧಿಕಾರಿ ದಿವ್ಯಾ ಪ್ರಭು ಜಿ.ಆರ್.ಜೆ ಹಾಗೂ ಸೆಲ್ಕೋ ದ ಏರಿಯಾ ಮ್ಯಾನೇಜರ್ ಮಂಜುನಾಥ್ ಬಾಗ್ವತ್ ರವರಿಂದ ಶಾಲೆಯ ಶಿಕ್ಷಕಿ ಲೋಲಾಕ್ಷಮ್ಮ ಅವರಿಗೆ ಡಿಜಿಟಲ್ ಎಜುಕೇಶನ್ ಟ್ಯಾಬ್ ನ್ನು ಹಸ್ತಾಂತರಿಸಲಾಯಿತು. ಪಠ್ಯಕ್ರಮಗಳಿಗೆ ತಕ್ಕಂತೆ ಒಂದರಿಂದ 12 ನೇ ತರಗತಿಯವರೆಗೆ ಶಿಕ್ಷಕರಿಗೆ ವಿವರಾದ ಮಾಹಿತಿಯುಳ್ಳ, ಸುಮಾರು ರೂ .45000 ಮೌಲ್ಯದ ಟ್ಯಾಬ್ ನ್ನು, ನೆಕ್ಸ್ಟ್ ಎಜುಕೇಶನ್ ಹಾಗು ಸೆಲ್ಕೋ ಸೋಲಾರ್ ಲೈಟ್ ಪ್ರೈವೇಟ್ ಲಿಮಿಟೆಡ್ ಮೂಲಕ ಉಚಿತವಾಗಿ ನೀಡಲಾಯಿತು.

### ಗುತ್ತಿಗೆ ಆಧಾರದಲ್ಲಿ ನೇಮಕ: ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ

» **ಚಿತ್ರದುರ್ಗ**

ಚಿತ್ರದುರ್ಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ "ಸಖಿ" (ಒನ್ ಸ್ಟಾಪ್ ಸೆಂಟರ್) ಘಟಕಕ್ಕೆ (24*7) ಆಧಾರದ ಮೇಲೆ ಕೆಲಸ ನಿರ್ವಹಿಸಲು 2023-24ನೇ ಸಾಲಿಗೆ ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳಲು ಅರ್ಹ ವಿದ್ಯಾರ್ಹತೆ ಹೊಂದಿರುವ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಕೆ ಇದೇ ಜುಲೈ 26 ರಿಂದ ಆರಂಭವಾಗಿದ್ದು, ಆಗಸ್ಟ್ 9 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒನಕೆ ಓಬವ್ವ ಸ್ಟೇಡಿಯಂ ಹತ್ತಿರ, ಜಿಲ್ಲಾ ಬಾಲಭವನ ಆವರಣ, ಚಿತ್ರದುರ್ಗ ಇ-ಮೇಲ್ ddwcdcta@gmail.com ಹಾಗೂ ದೂರವಾಣಿ ಸಂಖ್ಯೆ 08194-235259 ಗೆ ಸಂಪರ್ಕಿಸಬಹುದು.

### ಜಿಲ್ಲಾ ಮತ್ತು ತಾಪಂ ಸೀಮಾ ನಿರ್ಣಯ ಮಾರ್ಗಸೂಚಿ ಪ್ರಕಟ

» **ಬೆಂಗಳೂರು**

ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದಿಂದ ರಾಜ್ಯದ ಜಿಪಂ, ತಾಲೂಕು ಪಂಚಾಯ್ತಿ ಕ್ಷೇತ್ರಗಳ ಸೀಮಾ ನಿರ್ಣಯ ಸಂಬಂಧ ಪರಿಷ್ಕೃತ ಮಾರ್ಗಸೂಚಿಯನ್ನು ಪ್ರಕಟಿಸಲಾಗಿದೆ. ರಾಜ್ಯ ಸರ್ಕಾರದಿಂದ ಹೊರಡಿಸಿ ರುವಂತ ಪರಿಷ್ಕೃತ ಮಾರ್ಗಸೂಚಿ ಅನ್ವಯ ಆಯಾ ಕ್ಷೇತ್ರಗಳ ಗಡಿಯನ್ನು ಗುರುತಿಸಬೇಕು. ಗಡಿ ಗುರಿತಿಸದ ಬಳಿಕ ಸ್ಥಳೀಯ ಜನಪ್ರತಿನಿಧಿಗಳ ಅಭಿಪ್ರಾಯ ಪಡೆದು, ಪರಿಶೀಲಿಸಿ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಆಯಾ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.

**ತಾಲೂಕು ಪಂಚಾಯ್ತಿ ಗಡಿ ವ್ಯಾಪ್ತಿ:** ತಾಲೂಕು ಪಂಚಾಯ್ತಿ ಚುನಾಯಿತ ಸದಸ್ಯರ ಸಂಖ್ಯೆಯನ್ನು ನಿಗದಿಪಡಿಸುವಾಗ 2.30 ಲಕ್ಷಕ್ಕೆ ಮೀರಿದ ಗ್ರಾಮೀಣ ಜನಸಂಖ್ಯೆಯನ್ನು ಹೊಂದಿರುವ ತಾಲೂಕುಗಳಲ್ಲಿ ಪ್ರತಿ 12 ಸಾವಿರಕ್ಕೆ ಕಡಿಮೆಯಿಲ್ಲದ ಜನಸಂಖ್ಯೆಗೆ ಒಬ್ಬ ಚುನಾಯಿತ ಸದಸ್ಯ ಇರತಕ್ಕದ್ದು ಎಂದಿದೆ.



1 ಲಕ್ಷ ಮೀರಿದ ಆದರೇ 2.30 ಲಕ್ಷ ಮೀರದ ಗ್ರಾಮೀಣ ಜನಸಂಖ್ಯೆಯನ್ನು ಹೊಂದಿರುವ ತಾಲೂಕುಗಳಲ್ಲಿ ಪ್ರತಿ 10 ಸಾವಿರಕ್ಕೆ ಕಡಿಮೆಯಿಲ್ಲದ, ಜನಸಂಖ್ಯೆಗೆ ಒಬ್ಬ ಚುನಾಯಿತ ಸದಸ್ಯನು ಇರತಕ್ಕದ್ದು ಎಂದಿದೆ.

**ಜಿಪಂಕ್ಷೇತ್ರ ಗಡಿ ವ್ಯಾಪ್ತಿ:** ಜಿಪಂ ಚುನಾಯಿತ ಸದಸ್ಯರಲ್ಲಿ, ಜಿಲ್ಲೆಯ ತಾಲೂಕುಗಳಿಂಗ 25ಕ್ಕಿಂತಲೂ ಕಡಿಮೆ ಇಲ್ಲದಂತೆ ಚುನಾಯಿತ ಸದಸ್ಯರಿರತಕ್ಕದ್ದು. ಪ್ರತಿಯೊಂದು ತಾಲೂಕಿನಿಂದ ಚುನಾಯಿತರಾಗತಕ್ಕ ಸದಸ್ಯರ ಸಂಖ್ಯೆಯ 40 ಸಾವಿರ ಜನಸಂಖ್ಯೆಗೆ,ಅದರ ಭಾಗಕ್ಕೆ ಒಬ್ಬ ಸದಸ್ಯನಂತೆ ನಿಗದಿಪಡಿಸಲಾಗಿದೆ.

## ಪ್ರಮುಖ ಸುದ್ದಿ

### ಕಾನೂನು ಅರಿವು ನೆರವು ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿ ಎಂ.ವಿಜಯ್

# ಹದಿಹರೆಯ ವಿದ್ಯಾರ್ಥಿಗಳು ಜ್ಞಾನಾರ್ಜನೆ ಕಡೆಗೆ ಗಮನಹರಿಸಿ

» **ಚಿತ್ರದುರ್ಗ**

ಹದಿಹರೆಯದ ವಿದ್ಯಾರ್ಥಿಗಳು ಜ್ಞಾನಾರ್ಜನೆ ಪಡೆಯುವ ಕಡೆಗೆ ಮಾತ್ರ ಹೆಚ್ಚಿನ ಗಮನಹರಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಬುಧವಾರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ವಕೀಲರ ಸಂಘ, ಪದವಿಪೂರ್ವ ಶಿಕ್ಷಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ "ಪೋಕ್ಸೊ ಕಾಯ್ದೆ ಮತ್ತು ಮಕ್ಕಳ ಹಕ್ಕುಗಳು" ಬಗ್ಗೆ ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಹದಿಹರೆಯದ ವಿದ್ಯಾರ್ಥಿಗಳ ಮನಸ್ಥಿತಿ ಯಾವಾಗಲೂ ಓದುವ ಕಡೆಗೆ ಮಾತ್ರ ಇರಬೇಕು. ಬೇರೆ ಯಾವುದೇ ಆಕರ್ಷಣೆ, ಆಸೆ-ಆಮಿಷಗಳಿಗೆ ಒಳಗಾಗಬಾರದು. ಉತ್ತಮ ಶಿಕ್ಷಣ ಪಡೆದು ತಂದೆ-ತಾಯಿ, ಸಮಾಜಕ್ಕೆ ಕೀರ್ತಿ ತರುವ ಮೂಲಕ ಸ್ವಾಸ್ಥ್ಯ ಜೀವನ ನಡೆಸಬೇಕು ಎಂದು ಸಲಹೆ ನೀಡಿದರು.

ಹದಿಹರೆಯದ ವಿದ್ಯಾರ್ಥಿಗಳಲ್ಲಿ ದೈಹಿಕ ಹಾಗೂ ಮಾನಸಿಕವಾಗಿ ಬದಲಾವಣೆಗಳಾಗುತ್ತವೆ. 16 ರಿಂದ 18 ವರ್ಷದ ವಿದ್ಯಾರ್ಥಿಗಳು ಈ ವಯಸ್ಸಿನಲ್ಲಿ ತಪ್ಪು ದಾರಿ ಹಿಡಿದರೆ ಪೊಲೀಸ್ ಠಾಣೆ, ನ್ಯಾಯಾಲಯಕ್ಕೆ ಬರುವ ಸಾಧ್ಯತೆ ಹೆಚ್ಚಾಗಿರುತ್ತದೆ. ಇದನ್ನು ಗಮನಹರಿಸಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ವತಿಯಿಂದ ಪೋಕ್ಸೋ ಕಾಯ್ದೆ ಮತ್ತು ಮಕ್ಕಳ ಹಕ್ಕುಗಳ ಬಗ್ಗೆ ಕಾನೂನು ಅರಿವು ನೆರವು ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಎನ್.ರಾಜು ಮಾತನಾಡಿ, ಹದಿಹರೆಯದ ವಯಸ್ಸಿನ ವಿದ್ಯಾರ್ಥಿಗಳು ಪಠ್ಯ, ಪಠ್ಯೇತರ, ಕ್ರೀಡಾ ಹಾಗೂ ಸಾಂಸ್ಕೃತಿಕ ಚಟುವಟಿಕೆಯಂತಹ ಸ್ಪರ್ಧೆಗಳಲ್ಲಿ ಹೆಚ್ಚು ತೊಡಗಿಕೊಳ್ಳಬೇಕು. ಬೇರೆ ಯಾವುದೇ ಆಸೆ-ಆಮಿಷಗಳಿಗೆ ಒಳಗಾಗಿ ಜೀವನ ಹಾಳುಮಾಡಿಕೊಳ್ಳಬಾರದು. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಜಾಗೃತರಾಗಬೇಕು ಎಂದು ಸಲಹೆ ನೀಡಿದರು.

ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ ತಂದೆ-ತಾಯಿಗಳ ವಿಶ್ವಾಸಕ್ಕೆ ಧಕ್ಕೆ ತರುವ ಕೆಲಸ ಮಾಡಬಾರದು. ನಿಮ್ಮಗಳ ಜವಾಬ್ದಾರಿ ಅರಿತು ಕಲಿಕೆಗೆ ಹೆಚ್ಚು ಕೊಟ್ಟರೆ ಉತ್ತಮ ಪ್ರಜೆಗಳಾಗಿ ಭವ್ಯ ಭಾರತದ ನಿರ್ಮಾಣದಲ್ಲಿ ತೊಡಗಲು ಸಾಧ್ಯವಾಗಲಿದೆ. ಒಳ್ಳೆಯ ಸನ್ಮಾರ್ಗಗಳ ಬೆಳೆವಣಿಗೆ ದೆಸೆಯಲ್ಲಿ ವಿದ್ಯಾರ್ಥಿಗಳು ಯೋಚಿಸಬೇಕು ಎಂದರು.

ಪೋಕ್ಸೋ ಮತ್ತು ಮಕ್ಕಳ ಹಕ್ಕುಗಳ ಬಗ್ಗೆ ವಕೀಲ ಡಿ.ಎಂ.ಬಸವರಾಜ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಕಾರ್ಯದರ್ಶಿ ಆರ್.ಗಂಗಾಧರ್, ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಡಾ.ಬಿ.ಕೃಷ್ಣಪ್ಪ, ಉಪನ್ಯಾಸಕರಾದ ಡಾ.ಬಿ.ಎಂ.ಗುರುನಾಥ್, ಡಾ.ಎಸ್.ಎನ್.ಹೇಮಂತರಾಜು, ಕೆ.ರೇಣುಕಾ, ಆರ್.ಚಂದ್ರಕಲಾ ಸೇರಿದಂತೆ ಪ್ರಥಮ ಮತ್ತು ದ್ವಿತೀಯ ಪಿಯು ವಿದ್ಯಾರ್ಥಿಗಳು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T